ಸಂಪುಟ : 4 ಸಂಚಿಕೆ : 03 ಪುಟ : 4 ಬೆಲೆ : ರೂ. 4 ಶುಕ್ರವಾರ, ಫೆಬ್ರುವರಿ, 10, 2023 E-mail: newsbelagavi@gmail.com Mobile No-9900332089

ಬೆಳಗಾವಿ ಮತ್ತು ಬೆಂಗಳೂರಿನಿಂದ ಏಕ ಕಾಲದಲ್ಲಿ ಪ್ರಕಟಿತ



# ಬೆಳಗಾವಿ ವರದಿ

BELAGAVI VARADI KANNADA DAILY

ಕರ್ನಾಟಕ ಕನ್ನಡ ದಿನಪತ್ರಿಕೆ

ಸಂಪಾದಕರು : ಸತೀಶ್.ಬಿ.ಜಿ

Volume : 4 Issue : 03 Pages : 4 Rate : 4 Rs Friday, February 10, 2023 RNI : KARKAN/2020/79084 Post Regn.No:G-2/PMG/KA/NK/BM/139/2021-23 belagavivaradi@gmail.com

## ಬೆಂಗಳೂರಿನಲ್ಲಿ 5 ಹೊಸ ಟ್ರಾಫಿಕ್ ಪೊಲೀಸ್ ಠಾಣೆ: ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ



ಬೆಂಗಳೂರು: ಬೆಂಗಳೂರಿನಲ್ಲಿ ಹೊಸದಾಗಿ ಐದು ಟ್ರಾಫಿಕ್ ಪೊಲೀಸ್ ಠಾಣೆ ಸ್ಥಾಪಿಸಿ, ಒಬ್ಬರು ಡಿಸಿಪಿ, ಸಿಬ್ಬಂದಿ, ವಾಹನ ಹಾಗೂ ಎಲ್ಲಾ ಸಲಕರಣೆಗಳನ್ನು ಸರ್ಕಾರ ಒದಗಿಸುತ್ತಿದೆ. ವಾಹನ ದಟ್ಟಣೆಯನ್ನು ಸಂಪೂರ್ಣ ನಿಯಂತ್ರಿಸುವ ಉದ್ದೇಶವಿದ್ದು, 12 ಕಾರಿಡಾರ್ ರಸ್ತೆಗಳನ್ನು ಕೂಡ ಹೊಸದಾಗಿ ನಿರ್ಮಿಸುವ ತೀರ್ಮಾನ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು.


ಅವರು ಇಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವತಿಯಿಂದ ಆಯೋಜಿಸಿದ್ದ ಹೆಚ್.ಎ.ಎಲ್. ವಿಮಾನನಿಲ್ದಾಣದ ವಾರ್ಡ್, ಮಹದೇವಪುರ ವಲಯ ವ್ಯಾಪ್ತಿಯಲ್ಲಿನ ಸುರಂಜನ್ ದಾಸ್ ಜಂಕ್ಷನ್ ಬಳಿಯ ಕೆಳಸೇತುವೆಯನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದರು.

ಇಂದು ಲೋಕಾರ್ಪಣೆಯಾಗಿರುವ ಕೆಳಸೇತುವೆಯಿಂದಾಗಿ ವೈಟ್ ಫೀಲ್ಡ್ ನಿಂದ ಹಿಡಿದು ಎಂಜಿ ರಸ್ತೆಯವರೆಗೆ ಟ್ರಾಫಿಕ್ ಸಮಸ್ಯೆಗೆ ಪರಿಹಾರ ಸಿಕ್ಕಂತಾಗಿದೆ. ವಾಹನಗಳು ಇನ್ನು ಮುಂದೆ ಸುಗಮವಾಗಿ ಸಂಚಾರ ಮಾಡಬಹುದಾಗಿದೆ. ಹಿಂದೆ ಒಮ್ಮೆ ಎಚ್ ಎ ಎಲ್ ದಾರಿಯಲ್ಲಿ ಟ್ರಾಫಿಕ್ ಸಮಸ್ಯೆ ನೋಡಿ ಪರಿಹಾರ ನೀಡಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದ ಹಿನ್ನೆಲೆಯಲ್ಲಿ ಈ ಕೆಲಸವನ್ನು ಆದ್ಯತೆ ಮೇರೆಗೆ ಪೂರ್ಣಗೊಳಿಸಿರುವ ಅಧಿಕಾರಿಗಳನ್ನು ಮುಖ್ಯಮಂತ್ರಿಗಳು ಅಭಿನಂದಿಸಿದರು.

ದೀರ್ಘಾವಧಿ ಮತ್ತು ಅಲ್ಪಾವಧಿ ಕಾರ್ಯಕ್ರಮ ಬೆಂಗಳೂರು ಅತಿ ವೇಗದಲ್ಲಿ ಬೆಳೆಯುತ್ತಿರುವ ನಗರ. ಪ್ರತಿನಿತ್ಯ 5 ಸಾವಿರ ವಾಹನಗಳು ರಸ್ತೆಗಿಳಿಯುತ್ತವೆ. ಬೆಂಗಳೂರಿನಲ್ಲಿ ಪ್ರತಿ ದಿನ 10 ಲಕ್ಷ ಜನ ಬಂದುಹೋಗುವವರಿದ್ದಾರೆ. ಇದರ ಪರಿಹಾರಕ್ಕೆ ಹಲವಾರು ದೀರ್ಘಾವಧಿ ಮತ್ತು ಅಲ್ಪಾವಧಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಅವಶ್ಯಕತೆ ಇದೆ. ಸಂಚಾರ ಸುಗಮಗೊಳಿಸಲು ಅಮೃತ ನಗರೋತ್ಥಾನದಲ್ಲಿ 11 ಮೇಲ್ಸೇತುವೆಗಳನ್ನು ಕೈಗೊಂಡಿದ್ದು ಅನುಮೋದನೆಯನ್ನೂ ನೀಡಲಾಗಿದೆ. ಬೆಂಗಳೂರಿನ ಇತಿಹಾಸದಲ್ಲಿಯೇ ಒಂದೇ ವರ್ಷ 11 ಮೇಲ್ಸೇತುವೆಗಳಿಗೆ ಅನುಮೋದನೆ ನೀಡಿರುವುದು ಇದೇ ಪ್ರಥಮ ಬಾರಿ. ಬೆಂಗಳೂರಿಗೆ ದೊಡ್ಡ ಪ್ರಮಾಣದಲ್ಲಿ ಬದಲಾವಣೆ ಮಾಡಿದಾಗ ಮಾತ್ರ ಬೆಂಗಳೂರಿನ ನಾಗರಿಕರಿಗೆ ಪರಿಹಾರ ನೀಡಿದಂತಾಗುತ್ತದೆ ಎಂಬ ನಿಲುವಿನಿಂದ ಅಮೃತನಗರೋತ್ಥಾನ ಯೋಜನೆಯಡಿಯಲ್ಲಿ ಮೂರು ಸಾವಿರ ಕೋಟಿ ರೂ.ಗಳ ಅನುದಾನವನ್ನು ರಸ್ತೆ ನಿರ್ಮಾಣಕ್ಕೆ ಒದಗಿಸಲಾಗಿದೆ.

## ಇಂದಿನಿಂದ ವಿಧಾನ ಮಂಡಲ ಬಜೆಟ್ ಅಧಿವೇಶನ

### ಎಲ್ಲರೂ ಕಡ್ಡಾಯವಾಗಿ ಭಾಗವಹಿಸಿ: ಶಾಸಕರಿಗೆ ಸ್ಪೀಕರ್ ಕಾಗೇರಿ ಮನವಿ



ಬೆಂಗಳೂರು: ರಾಜ್ಯದಲ್ಲಿ ಬಜೆಟ್ ಮಂಡನೆ ಇರುವುದರಿಂದ ಶುಕ್ರವಾರ (ಫೆ. 10)ದಿಂದ ಅಧಿವೇಶನ ಆರಂಭವಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ಅಧಿವೇಶನದಲ್ಲಿ ಎಲ್ಲರೂ ಕಡ್ಡಾಯವಾಗಿ ಭಾಗವಹಿಸಬೇಕೆಂದು ಶಾಸಕರಿಗೆ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿಯವರು ಗುರುವಾರ ಮನವಿ ಮಾಡಿಕೊಂಡಿದ್ದಾರೆ.

ಅಧಿವೇಶನ ಕುರಿತು ಇಂದು ಮಾಹಿತಿ ನೀಡಿರುವ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿಯವರು, ಇದು ಈ ವಿಧಾನಸಭೆಯ 15ನೆಯ ಮತ್ತು ಕೊನೆಯ ಅಧಿವೇಶನ ಆಗಿರುತ್ತದೆ. ಅಧಿವೇಶನದಲ್ಲಿ ಎಲ್ಲರೂ ಕಡ್ಡಾಯವಾಗಿ ಪಾಲ್ಗೊಳ್ಳಬೇಕು. ಕೊನೆಯ ಅಧಿವೇಶನ ಎಂದು ಯಾರೂ ನಿರ್ಲಕ್ಷಿಸದೇ ಪಾಲ್ಗೊಳ್ಳಿ ಎಂದು ಮನವಿ ಮಾಡಿಕೊಂಡರು.

ಬೆಳಗಾವಿಯಲ್ಲಿ ಕಳೆದ ಅಧಿವೇಶನ ನಡೆದಿತ್ತು. ಅದಾದ ಬಳಿಕ ಈಗ ವಿಧಾನಸೌಧದಲ್ಲಿ ಸೇರುತ್ತಿದ್ದೇವೆ. ಪ್ರಜಾಪ್ರಭುತ್ವದ ದೇಗುಲ ಎಂದು ಕರೆಯಲಾಗುವ ಸದನ ಇದು. ಸದಸ್ಯರು ಜವಾಬ್ದಾರಿಯುತವಾಗಿ ನಡೆದುಕೊಂಡು ಅಧಿವೇಶದಲ್ಲಿ ಪಾಲ್ಗೊಳ್ಳಬೇಕೆಂದು ಬಯಸುತ್ತೇನೆಂದು ಹೇಳಿದರು.

ಫೆಬ್ರುವರಿ 10ರಂದು ಆರಂಭವಾಗುವ ಅಧಿವೇಶನ ಫೆ. 24ರವರೆಗೆ ನಡೆಯಲಿದೆ. ಇದು ಬಜೆಟ್ ಅಧಿವೇಶನವಾಗಿದ್ದು, ಫೆಬ್ರುವರಿ 17ರಂದು ಸಿಎಂ ಬಸವರಾಜ ಬೊಮ್ಮಾಯಿ ಅವರು ಬಜೆಟ್ ಮಂಡಿಸಲಿದ್ದಾರೆ.

ಫೆಬ್ರುವರಿ 20ರಿಂದ 24ರವರೆಗೂ ಬಜೆಟ್ ಮೇಲೆ ಚರ್ಚೆ ನಡೆಯಲಿದೆ. ಅಧಿವೇಶನ ಆರಂಭವಾಗುವ ನಾಳೆ 11 ಗಂಟೆಗೆ ರಾಜ್ಯಪಾಲರು ಬೃಹತ್ ಮೆಟ್ಟಿಲುಗಳ ಮೂಲಕ ವಿಧಾನಸಭೆಗೆ ಆಗಮಿಸಲಿದ್ದು, ಜಂಟಿ ಅಧಿವೇಶನವನ್ನು ಉದ್ದೇಶಿಸಿ ಭಾಷಣ ಮಾಡಲಿದ್ದಾರೆಂದು ತಿಳಿಸಿದರು.

ಈ ವರ್ಷದ ಮೊದಲ ಹಾಗೂ ಪ್ರಸಕ್ತ ಬಿಜೆಪಿ ಸರ್ಕಾರದ ಅಂತಿಮ ವಿಧಾನಮಂಡಲ ಅಧಿವೇಶನ ಇದಾಗಿದೆ, ಜಂಟಿ ಅಧಿವೇಶನ ಉದ್ದೇಶಿಸಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಭಾಷಣ ಮಾಡಲಿದ್ದು, ಚುನಾವಣೆ ವರ್ಷವಾಗಿರುವ ಹಿನ್ನೆಲೆಯಲ್ಲಿ ಆಡಳಿತ ಹಾಗೂ ಪ್ರತಿಪಕ್ಷಗಳ ನಡುವೆ ಕಾವೇರಿದ ಚರ್ಚೆಗಳು ನಡೆಯುವ ನಿರೀಕ್ಷೆಗಳಿವೆ.

ಈ ಬಾರಿಯ ಅಧಿವೇಶನದಲ್ಲಿ ಆಡಳಿತ ಪಕ್ಷದ ವೈಫಲ್ಯಗಳನ್ನು ಎತ್ತಿ ತೋರಿಸಿ ಮುಗಿಬೀಳಲು ಪ್ರತಿಪಕ್ಷಗಳು ಸಜ್ಜಾಗಿದ್ದು, ಫೆ.17ರಂದು ಜನಪ್ರಿಯ ಬಜೆಟ್ ಮಂಡಿಸುವ ಮೂಲಕ ಎದಿರೇಟು ನೀಡಲು ಬಿಜೆಪಿ ಸಿದ್ಧತೆ ನಡೆಸುತ್ತಿದೆ.

ಆಡಳಿತ ಪಕ್ಷಧ ವಿರುದ್ಧ ಕಾಂಗ್ರೆಸ್, ಜೆಡಿಎಸ್ ಪಕ್ಷಗಳು ಸ್ಯಾಂಟ್ರೋ ರವಿ ಪ್ರಕರಣ, ರಾಜ್ಯದಲ್ಲಿನ ಕಾನೂನು ಸುವ್ಯವಸ್ಥೆ, ಭ್ರಷ್ಟಾಚಾರ, ಉತ್ತರ ಕರ್ನಾಟಕ ನೀರಾವರಿ ಯೋಜನೆಗಳ ನಿರ್ಲಕ್ಷ್ಯ, ಕೇಂದ್ರದ ಬಜೆಟ್ ನಲ್ಲಿ ರಾಜ್ಯಕ್ಕೆ ಆದ ಅನ್ಯಾಯ ಸೇರಿದಂತೆ ಹಲವು ವಿಚಾರಗಳ ಬಗ್ಗೆ ಚರ್ಚೆ ಕೈಗೆತ್ತಿಕೊಳ್ಳುವ ಸಾಧ್ಯತೆಯಿದೆ. ಇದಕ್ಕೆ ಪ್ರತಿಯಾಗಿ ಬಿಜೆಪಿ ಪ್ರತಿಪಕ್ಷಗಳಿಗೆ ತಿರುಗೇಟು ನೀಡಲು ಸಜ್ಜಾಗಿದೆ.

## ಮಹಿಳೆಯರಿಗೆ ಉಚಿತ ಬಸ್ ಸೇವೆ ಒದಗಿಸಿ: ಸಿಎಂ ಆಗ್ರಹ



ಬೆಂಗಳೂರು: ರಾಜ್ಯ ಬಜೆಟ್ ಮಂಡನೆಗೆ ಕ್ಷಣಗಣನೆ ಆರಂಭವಾಗುತ್ತಿದ್ದಂತೆಯೇ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ (ಬಿಎಂಟಿಸಿ) ಬಸ್‌ಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣ ಸೇವೆ ಒದಗಿಸಬೇಕೆಂಬ ಆಗ್ರಹಗಳು ಹೆಚ್ಚಾಗುತ್ತಿವೆ.

ಪಂಜಾಬ್, ದೆಹಲಿ ಮತ್ತು ತಮಿಳುನಾಡಿನಂತಹ ರಾಜ್ಯಗಳು ಮಹಿಳೆಯರಿಗೆ ಉಚಿತ ಪ್ರಯಾಣ ಸೇವೆಯನ್ನು ಒದಗಿಸುತ್ತಿದ್ದು, ರಾಜ್ಯ ಸರ್ಕಾರ ಕೂಡ ಇಂತಹ ಸೇವೆಯನ್ನು ನೀಡಬೇಕೆಂಬ ಆಗ್ರಹಗಳು ಕೇಳಿ ಬರುತ್ತಿವೆ.

ಸರ್ಕಾರ ಇಂತಹ ಕ್ರಮಗಳನ್ನು ಕೈಗೊಂಡಿದ್ದೇ ಆದ- ರೆ, ಸಾಮಾಜಿಕ ಬದಲಾವಣೆಗಳು ಕಂಡು ಬರಲಿದೆ. ಇದು ಮಹಿಳೆಯರಿಗೆ ಹೆಚ್ಚಿನ ಸ್ವಾತಂತ್ರ್ಯ ನೀಡುವ ಸಾಮಾಜಿಕ ಬದಲಾವಣೆ ತರುವ ಹೆಜ್ಜಾಗಿದೆ ಎಂದು ಸಾರಿಗೆ ಕಾರ್ಯಕರ್ತರು ಅಭಿಪ್ರಾಯಪಟ್ಟಿದ್ದಾರೆ.

ಬೆಂಗಳೂರು ಬಸ್ ಪ್ರಯಾಣಿಕ ವೇದಿಕೆಯ ಸದಸ್ಯೆ ಶಹೀನಾ ಶಾಸ ಅವರು ಮಾತನಾಡಿ, ಬೆಂಗಳೂರಿನಲ್ಲಿ ಮಹಿಳೆಯರಿಗೆ ಉಚಿತ ಬಸ್ ಸೇವೆಯನ್ನು ರಾಜ್ಯ ಸರ್ಕಾರ ನೀಡಬೇಕು ಎಂದು ನಾವು ಒತ್ತಾಯಿಸುತ್ತಿದ್ದೇವೆ. ಪಂಜಾಬ್, ದೆಹಲಿಯಲ್ಲಿ ಇಂತಹ ಸೇವೆಗಳನ್ನು ನೀಡುತ್ತಿದೆ. ತಮಿಳುನಾಡು ಇತ್ತೀಚೆಗಷ್ಟೇ ಈ ಸೇವೆಯನ್ನು ಒದಗಿಸುತ್ತಿದೆ. ಇತ್ತೀಚೆಗಷ್ಟೇ ರಾಜ್ಯ ಯೋಜನಾ ಆಯೋಗದ ಸಮೀಕ್ಷೆಯೊಂದು ಮಹಿಳೆಯರು ಪ್ರತಿ ತಿಂಗಳು ರೂ.800–1000 ಉಳಿಸಲು ಸಮರ್ಥರಾಗಿದ್ದಾರೆಂದು ಹೇಳಿದೆ ಎಂದು ಹೇಳಿದ್ದಾರೆ. ದೇಶದ ಇತರೆ ನಗರಗಳಿಗೆ ಹೋಲಿಸಿದರೆ, ಬೆಂಗಳೂರಿನಲ್ಲಿ ಬಸ್ ಟಿಕೆಟ್ ಗಳ ದರ ಹೆಚ್ಚಾಗಿದೆ. ಇದು ಲಕ್ಷಾಂತರ ಮಹಿಳೆಯರ ಮೇಲೆ ಪರಿಣಾಮ ಬೀರುತ್ತಿದೆ. ಉಚಿತ ಬಸ್ ಸೇವೆ ಒದಗಿಸಿದ್ದೇ ಆದರೆ, ಇತರರ ಮೇಲೆ ಮಹಿಳೆಯರು ಅವಲಂಬಿಸುವುದು ಕಡಿಮೆಯಾಗುತ್ತದೆ. ಈ ಕ್ರಮವು ಮಹಿಳೆಯರಿಗೆ ಸ್ವಾತಂತ್ರ್ಯ ಹಾಗೂ ಅವಕಾಶಗಳು ಶಕ್ತಗೊಳಿಸುತ್ತದೆ ಎಂದು ತಿಳಿಸಿದ್ದಾರೆ.

## ವರುಣಾದಲ್ಲಿ ನಾನೇ ಅಭ್ಯರ್ಥಿ ಎಂದ ಡಾ.ಯತೀಂದ್ರ ಸಿದ್ದರಾಮಯ್ಯ



ಮೈಸೂರು: ಮುಂಬರುವ ವಿಧಾನಸಭಾ ಚುನಾವಣೆಗೆ ಕಾಂಗ್ರೆಸ್ ಭರ್ಜರಿ ತಯಾರಿ ನಡೆಸಿದ್ದು, ವರುಣಾ ಕ್ಷೇತ್ರದಲ್ಲಿ ನಾನೇ ಅಭ್ಯರ್ಥಿ ಎಂದು ವಿಪಕ್ಷ ನಾಯಕ ಸಿದ್ದರಾಮಯ್ಯ ಪುತ್ರ ಶಾಸಕ ಯತೀಂದ್ರ ಸಿದ್ದರಾಮಯ್ಯ ತಿಳಿಸಿದ್ದಾರೆ.


ಮೈಸೂರಿ ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕ ಯತೀಂದ್ರ, ನಮ್ಮ ತಂದೆ ಸಿದ್ದರಾಮಯ್ಯ ಕೋಲಾರದಿಂದ ಸ್ಪರ್ಧಿಸುವುದು ಖಚಿತವಾಗಿದೆ.

ಹಾಗಾಗಿ ವರುಣಾದಿಂದ ನಾನೇ ಸ್ಪರ್ಧಿಸುತ್ತಿದ್ದೇನೆ ಎಂದು ತಿಳಿಸಿದರು.

ವರುಣಾ ಕ್ಷೇತ್ರ ಯಾವಾಗಲೂ ಕಾಂಗ್ರೆಸ್ ಭದ್ರಕೋಟೆ. ಬಿಜೆಪಿಯಿಂದ ಯಾರೇ ಸ್ಪರ್ಧೆ ಮಾಡಿದರೂ ನಮಗೆ ಭಯವಿಲ್ಲ, ಎಲ್ಲಾ ಪಕ್ಷದವರು ಗೆಲುವಿಗಾಗಿ ಸ್ಟ್ರ್ಯಾಟಜಿ ಮಾಡುತ್ತಾರೆ.

ಏನೇ ಮಾಡಿದರೂ ಅಂತಿಮವಾಗಿ ವರುಣಾದಲ್ಲಿ ನಾವೇ ಗೆಲ್ಲುತ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

## ಕೇಂದ್ರದಿಂದ ಕರ್ನಾಟಕಕ್ಕೆ ಹೆದ್ದಾರಿ ಭಾಗ್ಯ



ನವದೆಹಲಿ: ಸದ್ಯದಲ್ಲೇ ವಿಧಾನಸಭೆ ಚುನಾವಣೆಗೆ ಸಾಕ್ಷಿಯಾಗಲಿರುವ ಕರ್ನಾಟಕದ ವಿವಿಧ ಭಾಗಗಳಿಗೆ ಕೇಂದ್ರ ಸಾರಿಗೆ ಸಚಿವಾಲಯ ಹಲವಾರು ಹೆದ್ದಾರಿಗಳ ನಿರ್ಮಾಣಕ್ಕೆ ಅನುಮೋದನೆ ನೀಡಿದೆ.

ಉತ್ತರ ಕರ್ನಾಟಕ ಮತ್ತು ಮೈಸೂರು ಭಾಗದ ಹೆದ್ದಾರಿಗಳು ಅಭಿವೃದ್ಧಿಯಾಗಲಿವೆ.

ಸ್ವತಃ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರೇ ಟ್ವಿಟರ್‌ನಲ್ಲಿ ಈ ಬಗ್ಗೆ ಮಾಹಿತಿ ನೀಡಿ- ದ್ದಾರೆ.ಕನಮಾಡಿ–ಬಿಜ್ಜರಗಿ–ತಿಕೋಟಾಸಂಪರ್ಕ ಮಾಡುವ ಎನ್ ಎಚ್ 166ಇ ಹೆದ್ದಾರಿ ವಿಸ್ತರಣೆಗಾಗಿ 196.05 ಕೋಟಿ ರೂ.ಗಳ ಅನುಮೋದನೆ ನೀಡಲಾಗಿದೆ.

ಹಾಗೆಯೇ ಕಲಬುರಗಿ ಮತ್ತು ವಿಜಯಪುರ ಜಿಲ್ಲೆಯ ಎನ್‌ಎಚ್ 548 ಬಿ ನಲ್ಲಿರುವ ಮುರ್ರಮ್‌ನಿಂದ ವಿಜಯಪುರದ ಐಬಿ ವೃತ್ತದವರೆಗಿನ ರಸ್ತೆ ವಿಸ್ತರಣೆಗಾಗಿ 957.09 ಕೋಟಿ ರೂ. ಅನುದಾನ ನೀಡಲಾಗುತ್ತದೆ.

ಕೊಪ್ಪಳ–ಗದಗ ಜಿಲ್ಲೆಯ ಭಾನಾಪುರ ಗದ್ದನಕೇರಿ ವಲಯದ ಎನ್ ಎಚ್ 367ರಲ್ಲಿ ಬರುವ ಕುಕುನೂರ್, ಯೆಲಬುರ್ಗಾ, ಗಜೇಂದ್ರಗಡದಲ್ಲಿ ಬೈಪಾಸ್ ರಸ್ತೆ ನಿರ್ಮಾಣಕ್ಕಾಗಿ 333.96 ಕೋಟಿ ರೂ.

ಇದೇ ವಲ ಯದ ಸರ್ಜಾಪುರದಿಂದ ಪಟ್ಟದಕಲ್ಲಿಗೆ ತೆರಳುವ ರಸ್ತೆ ವಿಸ್ತರಣೆಗಾಗಿ 445.62 ಕೋಟಿ ರೂ. ನೀಡಲು ಹೆದ್ದಾರಿ ಸಚಿವಾಲಯ ಒಪ್ಪಿಗೆ ನೀಡಿದೆ. ಇನ್ನು ಮೈಸೂರಿನಿಂದ ಕುಶಾಲ ನಗರದ ವರೆಗೆ ನಾಲ್ಕು ಪಥದ ರಸ್ತೆ ನಿರ್ಮಾಣಕ್ಕಾಗಿ 1,649.25 ಕೋಟಿ ರೂ. ಅನುದಾನ ಒದಗಿಸಲು ನಿರ್ಧರಿಸಲಾಗಿದೆ. ಕುಶಾಲನಗರ ಬಳಿ ಇರುವ ಗುಡ್ಡೆ ಹೊಸೂರಿನಿಂದ ಮೈಸೂರು ಬಳಿ ಇರುವ ಇಲವಾಲ–ಕೆ.ಆರ್. ನಗರ ಜಂಕ್ಷನ್‌ಗೆ ಸಂಪರ್ಕಿಸುತ್ತದೆ.

## ರಾಜ್ಯಸಭೆ: ಕಡತದಿಂದ ಖರ್ಗೆ ಮಾತು ತೆಗೆದ ಸಭಾಪತಿ



ನವದೆಹಲಿ: ರಾಜ್ಯಸಭೆಯ ವಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರ ಮಾತಿನ ಕೆಲ ಭಾಗವನ್ನು ಅಧಿಕೃತ ದಾಖಲೆಯಿಂದ ತೆಗೆದ ಸಭಾಪತಿ ಜಗದೀಪ್ ಧನ್ ಕರ್ ಅವರ ಕ್ರಮವನ್ನು ಪ್ರತಿಪಕ್ಷ ಕಾಂಗ್ರೆಸ್ ಗುರುವಾರ ಆಕ್ಷೇಪಿಸಿತು. ಖರ್ಗೆ ಅವರು ಅಸಂಸದೀಯ ಪದ ಬಳಸಿಲ್ಲ , ಅವರು ಬಳಸಿರುವ ಪದವನ್ನು ಈ ಹಿಂದೆ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಕೂಡಾ ಬಳಸಿರುವುದಾಗಿ ಹೇಳಿತು.

ರಾಜ್ಯಸಭೆಯಲ್ಲಿ ಕಲಾಪ ಆರಂಭವಾಗುತ್ತಿದ್ದಂತೆ, ಬುಧವಾರ ಖರ್ಗೆ ನೀಡಿದ್ದ ಹೇಳಿಕೆಯನ್ನು ಕಡತದಿಂದ ತೆಗೆದ ಸಭಾಪತಿಯ ಕ್ರಮವನ್ನು ಪ್ರಶ್ನಿಸಿದರು. ಈ ಹಿಂದೆ ಮಾಜಿ ಪ್ರಧಾನಿಗಳಾದ ಅಟಲ್ ಬಿಹಾರಿ ವಾಜಪೇಯಿ, ಮನ್ ಮೋಹನ್ ಸಿಂಗ್ ಕೂಡಾ ಈ ರೀತಿಯ ಹೇಳಿಕೆಯನ್ನು ಸದನದಲ್ಲಿ ನೀಡಿದ್ದು, ಅದು ಕಲಾಪದ ಭಾಗವಾಗಿ ಮುಂದುವರೆದಿದೆ ಎಂದರು. ಸದನದ ನಿಯಮಗಳಿಗೆ ವಿರುದ್ಧವಾಗಿ ಯಾವುದೇ ಅಸಂಸದೀಯ ಪದ ಅಥವಾ ಭಾಷೆಯನ್ನು ಬಳಸಿಲ್ಲ ಎಂದು ಖರ್ಗೆ ಹೇಳಿದರು.

ಅಸಂಸದೀಯ ಪದವನ್ನು ಸದನದಲ್ಲಿ ಬಳಸಬಾರದಿತ್ತು ಎಂದು ಧನಕರ್ ಖರ್ಗೆಗೆ ಹೇಳಿದರು. ಆದರೆ, ತಾವು ಬಳಸಿದ ಪದವನ್ನು ಈ ಹಿಂದೆ ಹಲವು ಬಾರಿ ಸದನದಲ್ಲಿ ಬಳಸಲಾಗಿದೆ. ವಾಜಪೇಯಿ, ಪಿ.ವಿ. ನರಸಿಂಹ ರಾವ್ ಕೂಡಾ ಬಳಸಿರುವುದಾಗಿ ಖರ್ಗೆ ತಿಳಿಸಿದರು.

## ಗಂಭೀರ ವಿಷಯಗಳ ಕಡೆ ಗಮನಹರಿಸುವಂತೆ ಸಲಹೆ ನೀಡಿ ಸಿಬಿಐಗೆ ಪತ್ರ ಬರೆಯುತ್ತೇನೆ: ಡಿಕೆಶಿ



ಶಿವಮೊಗ್ಗ: ಅಕ್ರಮ ಆಸ್ತಿ ಹೊಂದಿರುವ ಮತ್ತು ಹಣ ಅಕ್ರಮ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ ಅಧಿಕಾರಿಗಳು ಇದೀಗ ನನ್ನ ಕುಟುಂಬದವರನ್ನು ಟಾರ್ಗೆಟ್ ಮಾಡುತ್ತಿದ್ದು, ಮಂಗಳವಾರ ನನ್ನ ಪುತ್ರಿಗೆ ನೋಟಿಸ್ ನೀಡಿದ್ದಾರೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಆಕ್ರೋಶ ವ್ಯಕ್ತಪಡಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ನನ್ನ ಮಗಳ ಶಿಕ್ಷಣದ ಶುಲ್ಕ ಮತ್ತು ವಿವರಗಳನ್ನು ಕೋರಿ ನೋಟಿಸ್ ಕಳುಹಿಸಿದ್ದಾರೆ. ಇದಕ್ಕಿಂತ ಸಿಬಿಐಗೆ ದೊಡ್ಡ ದೊಡ್ಡ ಕೆಲಸಗಳಿವೆ. ಅವರಿಗೆ ನನ್ನ ಮಗಳ ಶಿಕ್ಷಣ ಶುಲ್ಕದ ಬಗ್ಗೆ ಮಾಹಿತಿ ಬೇಕಾಗಿದೆ. ಇದನ್ನು ಮಾಡುವ ಬದಲು ಇತರೆ ಗಂಭೀರ ವಿಷಯಗಳನ್ನು ಪರಿಶೀಲಿಸುವಂತೆ ಸಿಬಿಐಗೆ ಶಿಫಾರಸು ಮಾಡಿ ಪತ್ರ ಬರೆಯುತ್ತೇನೆ ಎಂದು ತಿಳಿಸಿದರು.

ಕೇಂದ್ರ ಸರ್ಕಾರ ಕೀಳುಮಟ್ಟದ ರಾಜ- ಕಾರಣ ಮಾಡುತ್ತಿದೆ. ನಮ್ಮನ್ನು ಎಷ್ಟು ಕೀಳಾಗಿ ನಡೆಸಿಕೊಳ್ಳಲಾಗುತ್ತಿದೆ ಎಂಬುದನ್ನು ನೀವೆ ಊಹಿಸಿ. ಜಾರಿ ನಿರ್ದೇಶನಾಲಯದಿಂದ (ಇ.ಡಿ) ತನಗೆ ನೋಟಿಸ್ ಕೂಡ ಬಂದಿದೆ. ಫೆಬ್ರುವರಿ 22 ರಂದು ತನಿಖೆಗೆ ಹಾಜರಾಗುವಂತೆ ಅವರು ನನ್ನನ್ನು ಕೇಳಿದ್ದಾರೆ ಎಂದು ಅವರು ಹೇಳಿದರು.

ಮದ್ಯ ಖರೀದಿಯ ವಯಸ್ಸನ್ನು 21 ವರ್ಷದಿಂದ 18 ವರ್ಷಕ್ಕೆ ಇಳಿಸುವ ಯೋಜನೆಗಳ ಬಗ್ಗೆ ಆಡಳಿತಾರೂಢ ಬಿಜೆಪಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಅವರು, 'ಧಾರ್ಮಿಕ ಶ್ರೀಗಳಿಂದ ವಿರೋಧ ವ್ಯಕ್ತವಾದ ನಂತರ ಈ ನಿರ್ಧಾರವನ್ನು ಕೈಬಿಡಲಾಗಿದೆ. ರಾಜ್ಯದಲ್ಲಿ ಆಡಳಿತಾರೂಢ ಬಿಜೆಪಿಯ ಮನಸ್ಥಿತಿಯನ್ನು ಇದರಿಂದ ತಿಳಿಯಬಹುದು ಎಂದು ಅವರು ಹೇಳಿದ್ದಾರೆ.

ಶಿವಮೊಗ್ಗ ಜಿಲ್ಲೆಯ ವಿಶ್ವೇಶ್ವರಯ್ಯ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆಗೆ (ವಿಐಎಸ್ ಎಲ್ ) ಗಣಿಗಾರಿಕೆಗೆ ಪರವಾನಗಿ ನೀಡಿದರೆ ಮಾತ್ರ ಅದಕ್ಕೆ ಉಳಿಗಾಲವಿದೆ. ಕೇಂದ್ರದಲ್ಲಿ ಬಿಜೆಪಿ ಏಳು ವರ್ಷಗಳಿಂದ ಆಡಳಿತ ನಡೆಸುತ್ತಿದ್ದು, ಗಣಿಗಾರಿಕೆಗೆ ಏಕೆ ಅನುಮತಿ ನೀಡಿಲ್ಲ? ಎಂದು ಶಿವಕುಮಾರ್ ಪ್ರಶ್ನಿಸಿದ್ದಾರೆ.

ಟೆಂಡರ್ ಬಿಲ್‌ಗೆ ಸಂಬಂಧಿಸಿದಂತೆ 22 ಸಾವಿರ ಕೋಟಿ ರೂಪಾಯಿ ಅವ್ಯವಹಾರ ನಡೆದಿದೆ ಎಂದು ಬಿಜೆಪಿ ಶಾಸಕ ಗೂಳಿಹಟ್ಟಿ ಶೇಖರ್ ಆರೋಪ ಮಾಡಿದ್ದನ್ನು ಅವರು ತರಾಟೆಗೆ ತೆಗೆದುಕೊಂಡರು. ರಾಜ್ಯದಲ್ಲಿ ಇನ್ನೊಂದು ತಿಂಗಳಲ್ಲಿ ನೀತಿ ಸಂಹಿತೆ ಜಾರಿಯಾಗಲಿದ್ದು, ಈ ಹಿನ್ನೆಲೆಯಲ್ಲಿ ಸರ್ಕಾರ ಟೆಂಡರ್‌ಗೆ ಆತುರಪಡುತ್ತಿದೆ ಎಂದು ಆರೋಪಿಸಿದರು.

ಶಿವಮೊಗ್ಗ ವಿಮಾನ ನಿಲ್ದಾಣಕ್ಕೆ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಅವರ ಹೆಸರಿಡಲು ಕಾಂಗ್ರೆಸ್‌ಗೆ ಅಭ್ಯಂತರವಿಲ್ಲ. ಆದರೆ, ಜಮೀನು ಕಳೆದುಕೊಂಡವರಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಹೇಳಿದರು.

## ಬುಲೆಟ್ ರೈಲು ಯೋಜನೆ ರಾಷ್ಟ್ರೀಯ ಮಹತ್ವದ್ದು: ಬಾಂಬೆ ಹೈಕೋರ್ಟ್



ಮುಂಬೈ: ಮುಂಬೈ– ಅಹ್ಮದಾಬಾದ್ ಬುಲೆಟ್ ರೈಲು ಯೋಜನೆಯನ್ನು ರಾಷ್ಟ್ರೀಯ ಮಹತ್ವದ ಯೋಜನೆ ಹಾಗೂ ಸಾರ್ವಜನಿಕರ ಹಿತಾಸಕ್ತಿಯ ಯೋಜನೆ ಎಂದು ಹೇಳಿರುವ ಬಾಂಬೆ ಹೈಕೋರ್ಟ್, ಯೋಜನೆಗೆ ಭೂಸ್ವಾಧೀನ ಪ್ರಕ್ರಿಯೆಯನ್ನು ಪ್ರಶ್ನಿಸಿ ಗೋದ್ರೇಜ್ & ಬಾಯ್ಸ್ ಕಂಪನಿ ಸಲ್ಲಿಸಿದ್ದ ಅರ್ಜಿಯನ್ನು ತಿರಸ್ಕರಿಸಿದೆ.

ಎನ್ ಹೆಚ್‌ಎಸ್ ಆರ್ ಸಿಎಲ್ ಹಾಗೂ ಮಹಾರಾಷ್ಟ್ರ ಸರ್ಕಾರ ಈ ಯೋಜನೆಗಾಗಿ ಸಬ್ ಅರ್ಬನ್ ವಿಖ್ರೋಲಿಯಲ್ಲಿ ಪ್ರಾರಂಭಿಸಿರುವ ಭೂಸ್ವಾಧೀನ ಪ್ರಕ್ರಿಯೆಯನ್ನು ವಿರೋಧಿಸಿ ಗೋದ್ರೇಜ್ & ಬಾಯ್ಸ್ ಕಂಪನಿ ಮುಂಬೈ ಹೈಕೋರ್ಟ್ ಗೆ ಅರ್ಜಿ ಸಲ್ಲಿಸಿತ್ತು.

ಈ ಸಂಸ್ಥೆ ಸಾರ್ವಜನಿಕ ಹಿತಾಸಕ್ತಿಯುಳ್ಳ ಇಡೀ ಯೋಜನೆ ವಿಳಂಬವಾಗುವಂತೆ ಮಾಡುತ್ತಿದೆ ಎಂದು ಮಹಾರಾಷ್ಟ್ರ ಹಾಗೂ ರಾಷ್ಟ್ರೀಯ ಹೈ ಸ್ಪೀಡ್ ರೈಲ್ ಕಾರ್ಪೊರೇಷನ್ (ಎನ್ ಹೆಚ್ ಎಸ್ ಆರ್ ಸಿಎಲ್) ವಾದ ಮಂಡಿಸಿತ್ತು.

ಆರ್ ಡಿ ಧನುಕಾ ಹಾಗೂ ಎಂಎಂ ಸಾಥಯೇ ಅವರಿದ್ದ ವಿಭಾಗೀಯ ಪೀಠ, ಈ ಯೋಜನೆ ಖಾಸಗಿ ಹಿತಾಸಕ್ತಿಗಳಿಗಿಂತ ಸಾರ್ವಜನಿಕ ಹಿತಾಸಕ್ತಿಗಳ ಪರವಾಗಿದೆ ಎಂದು ಹೇಳಿದೆ.

ಬುಲೆಟ್ ರೈಲು ಯೋಜನೆಗಾಗಿ ಭೂಸ್ವಾಧೀನ ಪಡಿಸಿಕೊಂಡಿದ್ದಕ್ಕೆ ಮಹಾರಾಷ್ಟ್ರ ಸರ್ಕಾರ ತನ್ನ ಸಂಸ್ಥೆಗೆ ನೀಡಿದ ಪರಿಹಾರವನ್ನು ಪ್ರಶ್ನಿಸಿ ಗೋದ್ರೇಜ್ & ಬಾಯ್ಸ್ ಕಂಪನಿ 2022 ರ ಸೆ.15 ರಂದು ಅರ್ಜಿ ಸಲ್ಲಿಸಿತ್ತು. ಸರ್ಕಾರ ಪ್ರಾರಂಭಿಸಿರುವ ಭೂಸ್ವಾಧೀನ ಪ್ರಕ್ರಿಯೆ, ಅಕ್ರಮವಾಗಿದ್ದು ಹಲವಾರು ಮತ್ತು ಪೇಟೆಂಟ್ ಅಕ್ರಮಗಳು ಪ್ರಕ್ರಿಯೆಯಲ್ಲಿವೆ ಎಂದು ವಾದಿಸಿತ್ತು.

ಪರಿಹಾರ ಅಥವಾ ಪ್ರಕ್ರಿಯೆಗಳಲ್ಲಿ ಅಕ್ರಮಗಳು ಕಾಣುತ್ತಿಲ್ಲ ಎಂದು ನ್ಯಾಯಪೀಠ ಹೇಳಿದ್ದು, ಈ ಯೋಜನೆ ಖಾಸಗಿ ಹಿತಾಸಕ್ತಿಗಳಿಗಿಂತ ಸಾರ್ವಜನಿಕ ಹಿತಾಸಕ್ತಿಗಳ ಪರವಾಗಿದೆ ಎಂಬ ಅಭಿಪ್ರಾಯದೊಂದಿಗೆ ಅರ್ಜಿ ವಿಲೇವಾರಿ ಮಾಡಿದೆ.

## ರಾಜ್ಯ ಸೈಬರ್ ಭದ್ರತಾ ನೀತಿ–2023ಕ್ಕೆ ಸಚಿವ ಸಂಪುಟ ಸಭೆ ಒಪ್ಪಿಗೆ



ಬೆಂಗಳೂರು: ಕರ್ನಾಟಕ ನವೀಕರಿಸಬಹುದಾದ ಇಂಧನ ನೀತಿ 2022–27ರ ತಿದ್ದುಪಡಿಗೆ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ನೀಡಲಾಗಿದೆ. ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ರಾಜ್ಯ ಸೈಬರ್ ಭದ್ರತಾ ನೀತಿ 2023ಕ್ಕೆ ಒಪ್ಪಿಗೆ ನೀಡಲಾಗಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ. ಸಿ. ಮಾಧುಸ್ವಾಮಿ ಸುದ್ದಿಗಾರರಿಗೆ ತಿಳಿಸಿದರು.

ಬಳ್ಳಾರಿ ಜಿಲ್ಲೆಯ ಹಗರಿಯಲ್ಲಿ ರೂ.25 ಕೋಟಿ ವೆಚ್ಚದಲ್ಲಿ ನೂತನ ಕೃಷಿ ಕಾಲೇಜು ಸ್ಥಾಪನೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ದಾವಣಗೆರೆ ಜಿಲ್ಲೆ ಹೊನ್ನಾಳಿ ತಾಲೂಕು ಆಸ್ಪತ್ರೆಯನ್ನು ರೂ.23.50 ಕೋಟಿ ವೆಚ್ಚದಲ್ಲಿ ಮೇಲ್ದರ್ಜೆಗೇರಿಸಲು ಸಂಪುಟ ಅನುಮೋದನೆ ನೀಡಿದೆ.

ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳ ಅಧಿನಿಯಮ 2022ನ್ನು ಭಾರತ ಸಂವಿಧಾನದ ಅನುಸೂಚಿ 9ರಲ್ಲಿ ಸೇರಿಸಲು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಸಲ್ಲಿಸಲು ತೀರ್ಮಾನ ಮಾಡಲಾಗಿದೆ.

ಜಲ ಜೀವನ್ ಮಿಷನ್ ಯೋಜನೆಯಡಿ ಚಾಮರಾಜನಗರ ತಾಲೂಕಿನ 166 ಗ್ರಾಮಗಳ ರೂ. 26 ಕೋಟಿ ವೆಚ್ಚದ ಕುಡಿಯುವ ನೀರು ಸರಬರಾಜು ಯೋಜನೆ, ಕಲಬುರಗಿಯ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಕಚೇರಿ ಹಾಗೂ ವಾಣಿಜ್ಯ ಸಂಕೀರ್ಣವನ್ನು ರೂ. 26.58 ಕೋಟಿ ವೆಚ್ಚದಲ್ಲಿ ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಬೆಂಗಳೂರಿನ ಗೋವಿಂದರಾಜ ನಗರದಲ್ಲಿರುವ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಗೆ ರೂ. 24 ಕೋಟಿ ವೆಚ್ಚದಲ್ಲಿ ವೈದ್ಯಕೀಯ ಉಪಕರಣಗಳ ಖರೀದಿಗೆ ಅನುಮೋದನೆ ಸಿಕ್ಕಿದ್ದು, ರಾಜ್ಯದ 30 ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಟಾಟಾ ಟೆಕ್ನಾಲಜಿ ಸಹಯೋಗದೊಂದಿಗೆ ರೂ. 927 ಕೋಟಿ ವೆಚ್ಚದಲ್ಲಿ ಮೇಲ್ದರ್ಜೆಗೇರಿಸಲು ಸಮ್ಮತಿ ನೀಡಲಾಗಿದೆ.

ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ರೂ.12 ಕೋಟಿ ವೆಚ್ಚದಲ್ಲಿ ನೂತನ ಪೊಲೀಸ್ ಭವನ ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ ದೊರಕಿದೆ. ಹಾವೇರಿ ಜಿಲ್ಲೆ ಶಿಗ್ಗಾಂವ ತಾಲೂಕಿನ ಕಲ್ಯಾಣ ಗ್ರಾಮದಲ್ಲಿ ರೂ.73.75 ಕೋಟಿ ವೆಚ್ಚದಲ್ಲಿ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ ಸ್ಥಾಪಿಸಲು ಅನುಮೋದನೆ ನೀಡಲಾಗಿದೆ.



# ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲಿ ಮುಂದುವರಿದ ಅಭಿವೃದ್ಧಿ ಸರಣಿ

ಬೆಳಗಾವಿ: ಚುನಾವಣೆ ಕೇವಲ 3 ತಿಂಗಳಿರುವಾಗಲೂ ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲಿ ಅಭಿವೃದ್ಧಿ ಕಾಮಗಾರಿಗಳ ಸರಣಿ ಮುಂದುವರಿದಿದೆ. ಗುರುವಾರ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಹಲವು ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಪೂಜೆ ನೆರವೇರಿಸುವ ಮೂಲಕ ಚಾಲನೆ ನೀಡಿದರು.

ರಾಜ್ಯದ ವಿವಿಧೆಡೆ ಶಾಸಕರು ಚುನಾವಣೆ ಪ್ರಚಾರ ಕಾರ್ಯದಲ್ಲಿ ತೊಡಗಿದ್ದರೆ ಲಕ್ಷ್ಮೀ ಹೆಬ್ಬಾಳಕರ್ ಮಾತ್ರ ಅಭಿವೃದ್ಧಿ ಯೋಜನೆಗಳನ್ನು ಮುಂದುವರಿಸಿದ್ದಾರೆ. ಗುರುವಾರ ಮುತ್ನಾಳ, ಕಂಗ್ರಾಳಿ, ವಿರಪನಕೊಪ್ಪ ಮೊದಲಾದ ಗ್ರಾಮಗಳಲ್ಲಿ ವಿವಿಧ ಕಾಮಗಾರಿಗಳ ಚಾಲನೆಗೆ ಪೂಜೆ ನೆರವೇರಿಸಿದರು.

**ಮುತ್ನಾಳ:**

50 ಲಕ್ಷ ರೂ,ಗಳ ವೆಚ್ಚದಲ್ಲಿ ಮುತ್ನಾಳ ಗ್ರಾಮದ ರಸ್ತೆಗಳಿಗೆ ಫೇವರ್ಸ್ ಅಳವಡಿಕೆಯ ಕಾಮಗಾರಿಗಳಿಗೆ ಲಕ್ಷ್ಮೀ ಹೆಬ್ಬಾಳಕರ್ ಚಾಲನೆ ನೀಡಿದರು.

ಬೆಳಗಾವಿ ಗ್ರಾಮೀಣ ಕ್ಷೇತ್ರದ ಮುತ್ನಾಳ ಗ್ರಾಮದ ಒಳಾಂಗಣ ರಸ್ತೆಗಳ ಅಭಿವೃದ್ಧಿ ಹಾಗೂ ಫೇವರ್ಸ್ ಅಳವಡಿಕೆ ಕಾಮಗಾರಿಗಳಿಗೆ ಲೋಕೋಪಯೋಗಿ ಇಲಾಖೆಯ ವತಿಯಿಂದ 50 ಲಕ್ಷ ರೂ,ಗಳನ್ನು ಮಂಜೂರಿ ಮಾಡಿಸಿ, ರಸ್ತೆಗಳಿಗೆ ಫೇವರ್ಸ್ ಅಳವಡಿಕೆಯ ಕಾಮಗಾರಿಗಳಿಗೆ ಭೂಮಿ ಪೂಜೆಯನ್ನು ಕೈಗೊಂಡು ಗ್ರಾಮಸ್ಥರ ಸಮ್ಮುಖದಲ್ಲಿ ಚಾಲನೆಯನ್ನು ನೀಡಿದರು.



ಈ ಸಮಯದಲ್ಲಿ ಕೇದಾರ ಮುತ್ನಾಳ ಶಾಖಾಪೀಠದ ಶ್ರೀ ಶಿವಾನಂದ ಶಿವಾಚಾರ್ಯ ಮಹಾಸ್ವಾಮಿಗಳು, ಗ್ರಾಮದ ಹಿರಿಯರು, ರುದ್ರಗೌಡ ಹುಬ್ಬಳ್ಳಿ, ಅಡಿವೆಪ್ಪಗೌಡ ಪಾಟೀಲ, ಈರನಗೌಡ ಪಾಟೀಲ, ಪಿ ಜಿ ಕೆಂಪಣ್ಣವರ, ಡಿ ಡಿ ಪಾಟೀಲ, ನಾಗಮ್ಮ ಕುರುಬರ, ಪಿ ಜೆ ಪಾರಿಶ್ವಾಡ್, ಆದಿನಾಥ ಯುವಕ ಮಂಡಳ, ಜ್ವಾಲಾಮಾಲಿನಿ ಸಂಘ, ಗ್ರಾಮ ಪಂಚಾಯತಿಯ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ಸರ್ವಸದಸ್ಯರು ಉಪಸ್ಥಿತರಿದ್ದರು.

ಮುತ್ನಾಳ ಗ್ರಾಮದಲ್ಲಿ ನೂತನ ಜೈನ ಭವನ ನಿರ್ಮಾಣಕ್ಕಾಗಿ ಅಲ್ಪಸಂಖ್ಯಾತರ ನಿಧಿಯ ವತಿಯಿಂದ 50 ಲಕ್ಷ ರೂ,ಗಳನ್ನು ಮಂಜೂರು ಮಾಡಿಸಲಾಗಿದ್ದು, ಜೈನ ಭವನದ ಕಟ್ಟಡ ಕಾಮಗಾರಿಗಳಿಗೆ ಗ್ರಾಮಸ್ಥರ ಸಮ್ಮುಖದಲ್ಲಿ ಚಾಲನೆಯನ್ನು ನೀಡಿದರು.

ಈ ಸಮಯದಲ್ಲಿ ಕೇದಾರ ಮುತ್ನಾಳ ಶಾಖಾಪೀಠದ ಶ್ರೀ ಶಿವಾನಂದ ಶಿವಾಚಾರ್ಯ ಮಹಾಸ್ವಾಮಿಗಳು, ಗ್ರಾಮದ ಹಿರಿಯರು, ಯುವ ಕಾಂಗ್ರೆಸ್ ಮುಖಂಡ ಮೃಣಾಲ ಹೆಬ್ಬಾಳಕರ್, ರುದ್ರಗೌಡ ಹುಬ್ಬಳ್ಳಿ, ಅಡಿವೆಪ್ಪಗೌಡ ಪಾಟೀಲ, ಈರನಗೌಡ ಪಾಟೀಲ, ಪಿ ಜಿ ಕೆಂಪಣ್ಣವರ, ಡಿ ಡಿ ಪಾಟೀಲ, ನಾಗಮ್ಮ ಕುರುಬರ, ಪಿ ಜೆ ಪಾರಿಶ್ವಾಡ್, ಆದಿನಾಥ ಯುವಕ ಮಂಡಳ, ಜ್ವಾಲಾಮಾಲಿನಿ ಸಂಘ, ಗ್ರಾಮ ಪಂಚಾಯತಿಯ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ಸರ್ವಸದಸ್ಯರು ಉಪಸ್ಥಿತರಿದ್ದರು.

ಮುತ್ನಾಳ ಗ್ರಾಮದ ಮುಸ್ಲಿಂ ಸಮಾಜದ ಮಸೀದಿಯ ಅಭಿವೃದ್ಧಿಗಾಗಿ ವೈಯಕ್ತಿಕ ಹಾಗೂ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ಮಸೀದಿಯ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆಯನ್ನು ಕೈಗೊಂಡು ಚಾಲನೆಯನ್ನು ನೀಡಿದೆರು.

ಈ ಸಮಯದಲ್ಲಿ ಗ್ರಾಮದ ಹಿರಿಯರು, ಸಲೀಂ ನದಾಫ್, ನಭೀಸಾಬ್ ನದಾಫ್, ಅಪ್ಪಾಸಾಹೇಬ್ ನದಾಫ್, ಮುನ್ನಾ ನದಾಫ್, ಅಸ್ಲಮ್ ನದಾಫ್, ರುದ್ರಗೌಡ ಹುಬ್ಬಳ್ಳಿ, ಪಾರೀಶ್ ಅಣ್ಣ, ಬಸನಗೌಡ ಪಾಟೀಲ, ಅಡಿವೆಪ್ಪಗೌಡ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

ಮುತ್ನಾಳ ಗ್ರಾಮದಲ್ಲಿ ಗ್ರಾಮ ಒನ್ ನಾಗರಿಕ ಸೇವಾ ಕೇಂದ್ರವನ್ನು ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಉದ್ಘಾಟಿಸಿದರು. ಈ ಸಮಯದಲ್ಲಿ ಗ್ರಾಮದ ಹಿರಿಯರು, ಜೀವನಕುಮಾರ ಪಾರಿಶ್ವಾಡ್, ರುದ್ರಗೌಡ ಹುಬ್ಬಳ್ಳಿ, ಅಡಿವೆಪ್ಪಗೌಡ ಪಾಟೀಲ, ಈರನಗೌಡ ಪಾಟೀಲ, ಪಿ ಜಿ ಕೆಂಪಣ್ಣವರ, ಡಿ ಡಿ ಪಾಟೀಲ, ನಾಗಮ್ಮ ಕುರುಬರ, ಪಿ ಜೆ ಪಾರಿಶ್ವಾಡ್, ಆದಿನಾಥ ಯುವಕ ಮಂಡಳ, ಜ್ವಾಲಾಮಾಲಿನಿ ಸಂಘ, ಗ್ರಾಮ ಪಂಚಾಯತಿಯ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ಸರ್ವಸದಸ್ಯರು ಉಪಸ್ಥಿತರಿದ್ದರು.

**ಕಂಗ್ರಾಳಿ ಕೆಎಚ್:**

ಬೆಳಗಾವಿ ಗ್ರಾಮೀಣ ಕ್ಷೇತ್ರದ ಕಂಗ್ರಾಳಿ ಕೆ ಎಚ್ ಗ್ರಾಮದ ಬೆನ್ನಾಳಕರ್ ರಸ್ತೆಯ ಚರಂಡಿ ನಿರ್ಮಾಣದ ಕಾಮಗಾರಿಗಳಿಗೆ ಲೋಕೋಪಯೋಗಿ ಇಲಾಖೆಯ ವತಿಯಿಂದ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಹಣ ಬಿಡುಗಡೆ ಮಾಡಿಸಿದ್ದಾರೆ.

ಗುರುವಾರ ಸ್ಥಳೀಯ ಜನಪ್ರತಿನಿಧಿಗಳು ಹಾಗೂ ಯುವ ಕಾಂಗ್ರೆಸ್ ಮುಖಂಡ ಮೃಣಾಲ ಹೆಬ್ಬಾಳಕರ್ ಸೇರಿ ಚರಂಡಿ ನಿರ್ಮಾಣದ ಕಾಮಗಾರಿಗಳಿಗೆ ಚಾಲನೆಯನ್ನು ನೀಡಿದರು.

ಈ ಸಮಯದಲ್ಲಿ ಗ್ರಾಮದ ಹಿರಿಯರು, ಜ್ಯೋತಿ ಪಾಟೀಲ, ಬಾಳು ಪಾಟೀಲ, ಲತಾ ಪಾಟೀಲ, ಅಲ್ಕಾ ಪಾಟೀಲ, ಮುತಗೇಕರ್ ಮೇಡಂ, ಜಿತೇಶ್ ಮೆನಸೆ, ಮೋಹನ್ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

**ಕಂಗ್ರಾಳಿ ಬಿ ಕೆ:**

ಕಂಗ್ರಾಳಿ ಬಿ ಕೆ ಗ್ರಾಮದ ನ್ಯೂ ವೈಭವ್ ನಗರದ ರಸ್ತೆಗಳ ಅಭಿವೃದ್ಧಿಗಾಗಿ ಲೋಕೋಪಯೋಗಿ ಇಲಾಖೆಯ ವತಿಯಿಂದ ಹಣ ಮಂಜೂರು ಮಾಡಿಸಲಾಗಿದ್ದು, ಅದರ ಪ್ರಕಾರ ಇವತ್ತು ಸ್ಥಳೀಯ ಜನಪ್ರತಿನಿಧಿಗಳು ಹಾಗೂ ಯುವ ಕಾಂಗ್ರೆಸ್ ಮುಖಂಡ ಒಡುಟಚಿಟ ಊಜಭ–ಛಚಿಟಇಚಿಡಿ ಸೇರಿ ರಸ್ತೆ ನಿರ್ಮಾಣದ ಕಾಮಗಾರಿಗಳಿಗೆ ಚಾಲನೆಯನ್ನು ನೀಡಿದರು.

ಈ ಸಮಯದಲ್ಲಿ ಗ್ರಾಮದ ಹಿರಿಯರು, ಪೂನಂ ಪಾಟೀಲ, ದತ್ತಾ ಪಾಟೀಲ, ಅನಿಲ ಪಾವಸೆ, ಬಂಡೆ ನವಾಜ ಸೈಯದ್, ಅಯೂಬ್ ಪಠಾಣ, ಶರೀಫ್ ಸನದಿ, ರಿಜ್ವಾನ್ ಪಠಾಣ ಸದ್ದಾಂ ಮುಲ್ಲಾ ಹಾಗೂ ಮುಂತಾದವರು ಉಪಸ್ಥಿತರಿದ್ದರು.

**ವಿರಪನಕೊಪ್ಪ:**

ಬೆಳಗಾವಿ ಗ್ರಾಮೀಣ ಕ್ಷೇತ್ರದ ವಿರಪನಕೊಪ್ಪ ಗ್ರಾಮದ ರಸ್ತೆಗಳ ಅಭಿವೃದ್ಧಿಗಾಗಿ ಲೋಕೋಪಯೋಗಿ ಇಲಾಖೆಯ ವತಿಯಿಂದ 53 ಲಕ್ಷ ರೂ,ಗಳನ್ನು ಮಂಜೂರು ಮಾಡಿಸಲಾಗಿದ್ದು, ಗುರುವಾರ ರಸ್ತೆ ನಿರ್ಮಾಣದ ಕಾಮಗಾರಿಗಳಿಗೆ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಭೂಮಿ ಪೂಜೆಯನ್ನು ಕೈಗೊಂಡು ಚಾಲನೆಯನ್ನು ನೀಡಿದರು.

ಈ ಸಮಯದಲ್ಲಿ ಗ್ರಾಮದ ಹಿರಿಯರು, ಸೂರ್ಯಗೌಡ ಪಾಟೀಲ, ಬಸನಗೌಡ ಪಾಟೀಲ, ಸಂಗನಗೌಡ ಪಾಟೀಲ, ಪ್ರವೀಣಗೌಡ ಪಾಟೀಲ, ಫಕೀರಗೌಡ ಪಾಟೀಲ, ಸಿದ್ದಪ್ಪ ಮಾದಿಗರ, ಬಸವಂತ ಅದೃಷಿ, ಶಂಕರಗೌಡ ಪಾಟೀಲ, ರಾಜು ಹಣಬರ, ವಿಠ್ಠಲ ಅಮ್ಮುಪುರ, ರಾಘವೇಂದ್ರ ಮಾದಿಗರ, ಮಹಾಂತೇಶ ಹಿರೇಮಠ, ರಾಜು ಅಮ್ಮುಪುರ ಮುಂತಾದವರು ಉಪಸ್ಥಿತರಿದ್ದರು.

# ಲೋಕಾಯುಕ್ತರಿಂದ ಸಾರ್ವಜನಿಕ ಕುಂದು ಕೊರತೆ ಸಭೆ




ಸಿರುಗುಪ್ಪ: ನಗರದ ತಾಲೂಕು ಕಛೇರಿಯ ಸಭಾಂಗಣದಲ್ಲಿ ಲೋಕಾಯುಕ್ತ ಸಿಪಿಐ ಸಂಗಮೇಶ ಅವರ ಅಧ್ಯಕ್ಷತೆಯಲ್ಲಿ ಸಾರ್ವಜನಿಕ ಕುಂದು ಕೊರತೆ ಮತ್ತು ಅಹವಾಲು ಸ್ವೀಕಾರ ಸಭೆ ನಡೆಯಿತು.

ಸಭೆಯಲ್ಲಿ ಸಿರಿಗೇರಿ ಗ್ರಾಮದಲಿ ಎರಡು ವೈನ್‌ಶಾಪ್‌ಗಳಿದ್ದರೂ ಗ್ರಾಮ ಮತ್ತು ಸುತ್ತಮುತ್ತಲಿನ ಗ್ರಾಮಗಳಿಗೆ ಅಕ್ರಮವಾಗಿ ಮಾರಾಟ ಮಾಡುತ್ತಿರುವುದರಿಂದ ಗ್ರಾಮದಲ್ಲಿ ದಿನದ 24 ತಾಸುಗಳು ಮದ್ಯ ದೊರೆ–ಯುತ್ತಿದ್ದು, ಅಕ್ರಮವಾಗಿ ಮಾರುತ್ತಿರುವ ವೈನ್‌ಶಾಪ್ ಮಾಲಿಕನ ವಿರುದ್ಧ ಹಾಗೂ ಅಕ್ರಮ ಮದ್ಯ ಮಾರಾಟಗಾರರ ಮೇಲೆ ಸೂಕ್ತ ಕ್ರಮಕೈಗೊಳ್ಳುವಂತೆ ಈ ಹಿಂದೆ ಜಿಲ್ಲಾಧಿಕಾರಿಗಳಿಗೆ ಗ್ರಾ.ಪಂ. ಪಿಡಿಓ, ಇಓ, ತಹಶೀಲ್ದಾರರು ಹಾಗೂ ಅಬಕಾರಿ ಇಲಾಖೆಗಳಿಗೆ ದೂರು ನೀಡಿದ್ದರೂ ಯಾವುದೇ ಕ್ರಮ ಜರುಗಿಸದ ಅಧಿಕಾರಿಗಳ ನಿರ್ಲಕ್ಷ್ಯತೆಯ ಬಗ್ಗೆ ಗ್ರಾಮಸ್ಥರಾದ ಎನ್.ವಿರುಪಾಕ್ಷಿ, ಶಿವರಾಜ್ ಅಸಮಧಾನ ವ್ಯಕ್ತಪಡಿಸಿದರು.

ನಗರದ ಸದಾಶಿವ ನಗರದಲ್ಲಿ ರಸ್ತೆ ಒತ್ತುವರಿಯಾಗಿ ನಿವೇಶನಗಳಿಗೆ ದಾರಿಯಿಲ್ಲದಂತಾಗಿದ್ದು ಈ ಬಗ್ಗೆ ಅಧಿಕಾರಿಗಳಿಗೆ ತಿಳಿಸಿದರೂ ಯಾವುದೇ ಪ್ರಯೋಜನವಾಗಿಲ್ಲವೆಂದು ಮುಂದಿನ ದಿನಗಳಲ್ಲಾದರೂ ನ್ಯಾಯ ದೊರೆಕಿಸಬೇಕೆಂದು ಮನವಿ ಮಾಡಿದರು.

ಹಚ್ಚೊಳ್ಳಿ ಗ್ರಾಮದಲ್ಲಿ ಜಮೀನುಗಳಿಗೆ ರೈತರಿಗೆದಾರಿ ಒದಗಿಸುವಂತೆ ವಿನಂತಿಸಿದರು. ಕೆ.ಆರ್.ಎಸ್. ಪಕ್ಷದ ಮುಖಂಡ ಟಿ.ಯಲ್ಲಪ್ಪ ತಾಲೂಕಿನಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಸಾರ್ವಜನಿಕರಿಗೆ ಆಸನ, ಶೌಚಾಲಯ, ಕುಡಿಯುವ ನೀರಿನಂತಹ ಮೂಲಭೂತ ಸೌಕರ್ಯಗಳ ವ್ಯವಸ್ಥೆ ಕಲ್ಪಿಸುವಂತೆ ಒತ್ತಾಯಿಸಿದರು.

ನಗರದ ಹೆದ್ದಾರಿ 54(ಎ), ಆದೋನಿ ರಸ್ತೆಯಲ್ಲಿ ಕಾಮಗಾರಿ ಪ್ರಾರಂಭಿಸಿದ್ದು, ಗುತ್ತಿಗೆದಾರರು ಕಾಮಗಾರಿ ರಸ್ತೆಯಲ್ಲಿ ದೂಳು ಹರಡದಂತೆ ನೀರು ಹಾಕದಿರುವುದರಿಂದ ಪ್ರಯಾಣಕರು ದೂಳಿನಿಂದ ಸಮಸ್ಯೆ ಅನುಭವಿಸುತ್ತಿರುವುದು, ಕಾಮಗಾರಿ ವಿಳಂಬವಾಗಿ ದುರ್ಗಮವಾಗಿರುವ ಹೆದ್ದಾರಿ ರಸ್ತೆಯಿಂದ ದಿನಕ್ಕೊಂದು ಅವಘಡಗಳು ನಡೆ–ಯುತ್ತಿದ್ದು ಸಂಬಂದಿಸಿದವರ ಮೇಲೆ ಸೂಕ್ತ ಕ್ರಮ ಜರುಗಿಸುವಂತೆ ಕೆ.ಆರ್.ಎಸ್. ಪಕ್ಷದ ತಾ.ಅ.ಮುತ್ತಣ್ಣ ಆಗ್ರಹಿಸಿದರು.

ಸಮಸ್ಯೆಗಳನ್ನು ಸಮಾಧಾನದಿಂದ ಆಲಿಸಿದ ಲೋಕಾಯುಕ್ತರು ಮುಂದಿನ ದಿನಗಳಲ್ಲಿ ಸಂಬಂದಿಸಿದ ಅಧಿಕಾರಿಗಳಿಂದ ಸರಿಪಡಿಸುವುದಾಗಿ ತಿಳಿಸಿದರು.

ಇದೇ ವೇಳೆ ತಹಶೀಲ್ದಾರ್ ಎನ್.ಆರ್. ಮಂಜುನಾಥಸ್ವಾಮಿ, ತಾ.ಪಂ.ಇಓ ಮಡಗಿನ ಬಸಪ್ಪ, ಪೌರಾಯುಕ್ತ ಪ್ರೇಮ್‌ಚಾರ್ಲ್ಸ್ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಇದ್ದರು.

# ಸಿಬಿಐ ಬಲೆಗೆ ಪುರಾತತ್ವ ಇಲಾಖೆಯ ನೌಕರರು



ಬಳ್ಳಾರಿ: ಮನೆ ನಿರ್ಮಿಸಲು ಎನ್‌ಓಸಿ ನೀಡಲು ಕೇಂದ್ರ ಪುರಾತತ್ವ ಇಲಾಖೆಯ ಮೂರು ಜನ ನೌಕರರು ಲಂಚ ಪಡೆಯುವಾಗ ಸಿಬಿಐ ಬಲೆಗೆ ಬಿದ್ದಿರುವ ಘಟನೆ ನಗರದಲ್ಲಿ ನಡೆದಿದೆ.

ಕೇಂದ್ರ ಪುರಾತತ್ವ ಇಲಾಖೆಯ ಪ್ರಶಾಂತ್ ರೆಡ್ಡಿ, ಯೋಗೀಶ್, ಮೊಹಮದ್ ಗೌಸ್ ಸಿಬಿಐ ಬಲೆಗೆ ಬಿದ್ದವರಾಗಿದ್ದಾರೆ.

ಬಳ್ಳಾರಿ ಕೋಟೆ ಸುತ್ತಮುತ್ತ ಪ್ರದೇಶದಲ್ಲಿ ಮನೆ ಕಟ್ಟಲು ಪುರಾತತ್ವ ಇಲಾಖೆ (ಎನ್‌ಒಸಿ) ಅನುಮತಿ ನೀಡಲು ಹಣದ ಬೇಡಿಕೆ ಇಟ್ಟಿದ್ದರು.

ಬಳ್ಳಾರಿ ನಗರದ ಇನ್ ಫ್ಯಾಂಟ್ರಿ ರಸ್ತೆಯಲ್ಲಿ ಮನೆ ಕಟ್ಟಲು ಅನುಮತಿ ಕೋರಿ ಅರ್ಜಿ ಸಲ್ಲಿಸಿದ್ದರು ದೂರುದಾರ ಅರ್ಜಿ ಸಲ್ಲಿಸಿದ ಬಳಿಕ ಒಂದುವರೆ ಲಕ್ಷ ಹಣಕ್ಕೆ ನೌಕರರು ಬೇಡಿಕೆ ಇಟ್ಟಿದ್ದರು.ಅದಕ್ಕಾಗಿ ದೂರುದಾರ ಸಿಬಿಐಗೆ ಇಂದು ದೂರು ನೀಡಿದ್ದರು. ಖಾಸಗಿ ಹೋಟೆಲ್‌ನಲ್ಲಿ ದೂರುದಾರ ರಾಜಶೇಖರ್ ಎಂ. ಅವರಿಂದ ಮುಂಗಡ ಹಣ ಪಡೆಯುತ್ತಿದ್ದಾಗ ಪುರಾತತ್ವ ಇಲಾಖೆಯ ನೌಕರರನ್ನು ಸಿಬಿಐನವರು ವಶಕ್ಕೆ ಪಡೆದು, ಅವರ ಮನೆ ಮೇಲೆ ದಾಳಿ ನಡೆಸಿ ದಾಖಲೆ ವಶಕ್ಕೆ ಪಡೆದಿದ್ದಾರೆ.

# ವಕೀಲರೊಬ್ಬರ ಕಾಳಜಿಯಿಂದ ಶಾಲೆಗೆ ಮರಳಿದ ಮಕ್ಕಳು

ಸಿರುಗುಪ್ಪ : ತಾಲೂಕಿನ ಮುದ್ದಟ್ಟನೂರು ಗ್ರಾಮದ ನವಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮಕ್ಕಳು ಪದೇ ಪದೇ ಶಾಲೆಗೆ ಗೈರಾಗುತ್ತಿರುವ ಬಗ್ಗೆ ಈ ಹಿಂದೆ ನ್ಯಾಯವಾದಿ ರಾಂಬಾಬು ಅವರು ಜಿಲ್ಲಾಧಿಕಾರಿ, ಸಮಾಜ ಕಲ್ಯಾಣ, ಶಿಕ್ಷಣಾಧಿಕಾರಿಗಳಿಗೆ, ದೂರು ಸಲ್ಲಿಸಿದ್ದರಿಂದ ತಾಲೂಕು ಮಟ್ಟದ ಸಾರ್ವಜನಿಕ ಶಿಕ್ಷಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಗ್ರಾಮ ಪಂಚಾಯಿತಿಗಳ ಸಹಯೋಗದಲ್ಲಿ ಪೋಷಕರ ಸಭೆ ಬುಧವಾರ ನಡೆಯಿತು.

ಸಮಸ್ಯೆಯನ್ನು ಎಳೆ ಎಳೆಯಾಗಿ ಬಿಚ್ಚಿಟ್ಟ ವಕೀಲ ರಾಂಬಾಬು ನವಗ್ರಾಮದಲ್ಲಿ ಸುಮಾರು 2 ವರ್ಷದಿಂದ ಕೆಲ ಮಕ್ಕಳು ಶಾಲೆಗೆ ತೆರಳದೇ ಮನೆಯಲ್ಲಿ ಉಳಿಯಲು ಹಾಗೂ ವಿದ್ಯಾಭ್ಯಾಸ ಕುಂಠಿತ ಗೊಂಡಿರುವುದಕ್ಕೆ ಮಕ್ಕಳ ಹಾಜರಾತಿಯನ್ನು ಸರಿಯಾದ ರೀತಿಯಲ್ಲಿ ದಾಖಲಿಸದ ಶಿಕ್ಷಣ ಇಲಾಖೆಯ ಅಧಿಕಾರಿಗಳೇ ಕಾರಣವೆಂದು ಆರೋಪಿಸಿದರಲ್ಲದೇ ಇದನ್ನು ಸರಿಪಡಿಸಿ ತಪ್ಪಿಸ್ಥರ ವಿರುದ್ಧ ಕ್ರಮಕೈಗೊಳ್ಳುವಂತೆ ಆಗ್ರಹಿಸಿದರು.



ಅದಕ್ಕೆ ಸ್ಪಂದಿಸಿದ ಅಧಿಕಾರಿ ವರ್ಗ ಮಕ್ಕಳನ್ನು ಶಾಲೆಗೆ ಮರಳಿ ಕರೆತರುವ ಜವಬ್ದಾರಿಯನ್ನು ಸಾಮೂಹಿಕವಾಗಿ ವಹಿಸಿ ಕೊಂಡಿದ್ದರಿಂದ ಸಭೆ ಸುಖಾಂತ್ಯ ಕಂಡಿತಲ್ಲದೇ ಮನೆ ಮನೆಗೆ ಭೇಟಿ ನೀಡಿ ಪೋಷಕರನ್ನು ಮನವೊಲಿಸಿ ಶಾಲೆಗೆ ಕಳುವಹಿಸುವಂತೆ ತಿಳಿಸಲಾಯಿತು.

ಅದರಂತೆಗುರುವಾರ ಬೆಳಿಗ್ಗೆ ವಿದ್ಯಾರ್ಥಿಗಳನ್ನು ಆಟೋ ಮೂಲಕ ಶಾಲೆಗೆ ಕಳುಹಿಸಲಾಯಿತು.

ಇದೇ ವೇಳೆ ಕ್ಷೇತ್ರ ಶಿಕ್ಷಣಾಧಿಕಾರಿ ಗುರ್‍ರಪ್ಪ, ಪಿ.ಎಸ್.ಐ ವೆಂಕಟೇಶ ನಾಯಕ, ಸಮಾಜಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕಿರಾಜೇಶ್ವರಿ, ಪಿ.ಡಿ.ಓ ಬಸವರಾಜ್, ಡಿವಿಪಿ ಜಿಲ್ಲಾಧ್ಯಕ್ಷ ಲಕ್ಷ್ಮಣ ಭಂಡಾರಿ, ಗ್ರಾ.ಪಂ.ಅಧ್ಯಕ್ಷರಾಮಕೃಷ್ಣ ಹಾಗೂ ಇನ್ನಿತರಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು, ಗ್ರಾಮಸ್ಥರು ಇದ್ದರು.

# ಸಚಿವ ಜೆಸಿಎಂ ತಮ್ಮ ನಾಲಿಗೆಯ ಮೇಲೆ ಹಿಡಿತ ಹೊಂದಲಿ

ಹುಳಿಯಾರು: ಸರಕಾರದ ಒಂದು ಅಂಗವಾಗಿರುವ ಸಚಿವ ಜೆ.ಸಿ.ಮಾಧುಸ್ವಾಮಿ ತಮ್ಮ ಮಾತಿನ ಮೇಲೆ ಹಿಡಿತ ಇಟ್ಟುಕೊಂಡು ಮತ್ತೊಬ್ಬರ ಮೇಲೆ ಗೌರವಯುತವಾಗಿ ಮಾತನಾಡುವುದನ್ನು ರೂಢಿಸಿಕೊಳ್ಳಲಿ. ಇಲ್ಲವಾದರೆ ಜನರೆ ಅವರಿಗೆ ಮುಂದಿನ ಚುನಾವಣೆಯಲ್ಲಿ ಬುದ್ದಿ ಕಲಿಸುತ್ತಾರೆ ಎಂದು ಮಾಜಿ ಶಾಸಕ ಸಿ.ಬಿ.ಸುರೇಶ್ ಬಾಬು ಹೇಳಿದರು.



ಹುಳಿಯಾರು ಪಟ್ಟಣದ ವಿವಿಧ ವಾರ್ಡ್‌ಗಳಲ್ಲಿ ಬುಧವಾರದಂದು ಅಭಿವೃದ್ಧಿ ಕೆಲಸಗಳಿಗೆ ಗುದ್ದಲಿ ಪೂಜೆ ಮಾಡುವ ಸಂದರ್ಭದಲ್ಲಿ ಸಚಿವ ಜೆ.ಸಿ.ಮಾಧುಸ್ವಾಮಿ ಅವರು ಶಿಷ್ಟಾಚಾರ ಉಲಂಘಿಸಿ ತಾಲೂಕಿನಲ್ಲಿ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ, ಉದ್ಘಾಟನೆ ಮಾಡುತ್ತಿದ್ದಾರೆ. ಇದನ್ನು ವಿರೋಧಿಸಿದ ಹುಳಿಯಾರು ಪಪಂ ಸದಸ್ಯರ ಮೇಲೆ ಅವಾಚ್ಯ ಶಬ್ಧಗಳಿಂದ ಬೈದಿದ್ದಾರೆ ಎಂದು ಆರೋಪಿಸಿ ಗುರುವಾರ ಸಿಬಿಎಸ್ ಪತ್ರಿಕಾ ಗೋಷ್ಠಿ ನಡೆಸಿದರು.

ಜನ ಪ್ರತಿನಿಧಿಯಾದವರಿಗೆ ಅವರದೇ ಆದ ಜವಾಬ್ದಾರಿ ಮತ್ತು ಗೌರವ ಇರುತ್ತದೆ. ಪಪಂ ವಾರ್ಡ್‌ಗಳಲ್ಲಿ ಅದರಲ್ಲೂ ಪಪಂನ ನಗರೋತ್ಥಾನದ ಅನುಧಾನದಲ್ಲಿ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮಾಡುವಾಗ ಅಲ್ಲಿನ ಚುನಾಯಿತ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವುದು ಶಿಷ್ಠಾಚಾರ.

ಆದರೆ ಕಾನೂನು ಸಚಿವರೆ ಶಿಷ್ಠಾಚಾರ ಪಾಲಿಸದೆ ಸರ್ವಾಧಿಕಾರಿ ಧೋರಣೆಯಿಂದ ಏಕಾಏಕಿ ತಮ್ಮ ಪಕ್ಷದ ಬೆಂಬಲಿರನ್ನು ಸೇರಿಸಿಕೊಂಡು ಶಂಕುಸ್ಥಾಪನೆ ನಡೆಸುತ್ತಿದ್ದಾರೆ. ಈ ಮೂಲಕ ಪ್ರಜಾಪ್ರಭುತ್ವವನ್ನು ಗಾಳಿಗೆ ತೂರುತ್ತಿದ್ದಾರೆ ಎಂದು ಆರೋಪಿಸಿದರು.

ಶಿಷ್ಟಾಚಾರ ಉಲ್ಲಂಘಿಸಿರುವ ಬಗ್ಗೆ ವಿರೋಧ ಪಕ್ಷದ ಸದಸ್ಯರು ಪ್ರಶ್ನಿಸಿದರೆ ಏಕ ವಚನದಲ್ಲಿ ಬಾಯಿಗೆ ಬಂದಂತೆ ಅಸಭ್ಯ ಪದಗಳನ್ನು ಬಳಸಿ ರೇಗುತ್ತಿದ್ದಾರೆ. ಸಚಿವರು ಬಳಸಿದ ಅವಾಚ್ಯ ಪದಗಳನ್ನೇ ಜನರ ಎದುರಿಗೆ ತಿರುಗಿಸಿ ಸಚಿವರಿಗೆ ಬೈದರೆ ಸಚಿವರಾಗಿರುವ ನಿಮ್ಮ ಗೌರವ ಏನಾಗುತ್ತದೆ ಎಂಬುದನ್ನು ಅರಿತ್ತಿದ್ದೀರಾ ಎಂದು ಪ್ರಶ್ನಿಸಿದರಲ್ಲದೆ ಮಾತು ಆಡಿ–ದರೆ ಹೋಯ್ತು, ಮುತ್ತು ಹೊಡೆದರೆ ಹೋಯ್ತು ಎನ್ನುವಂತೆ ಸಾರ್ವಜನಿಕ ಸೇವೆಯಲ್ಲಿರುವವರು ಅದರಲ್ಲೂ ಸರ್ಕಾರದ ಪ್ರತಿನಿಧಿಯಾಗಿರುವವರು ಅಳೆದು ತೂಗಿ ಮಾತನಾಡಬೇಕು. ಹಾಗಾಗಿ ಸಚಿವರು ತಮ್ಮ ಮಾತಿನ ಶೈಲಿಯನ್ನು ಬದಲಾಯಿಸಿಕೊಳ್ಳುವುದು ಒಳಿತು ಎಂದು ಸಲಹೆ ನೀಡಿದರು.

ಜಿಲ್ಲಾಧಿಕಾರಿಗಳು ಕಚೇರಿಯಲ್ಲಿ ಕಣ್ಣು ಮುಚ್ಚಿಕೊಂಡು ಕೂರದೆ ಇತ್ತ ಗಮನಹರಿಸಿ. ಹುಳಿಯಾರು ಪಪಂನಲ್ಲಿ ಶಿಷ್ಟಾಚಾರ ಉಲ್ಲಂಘನೆ ಆಗುತ್ತಿರುವ ಬಗ್ಗೆ ಕ್ರಮ ಕೈಗೊಂಡು ಚುನಾಯಿತ ಎಲ್ಲಾ ಸದಸ್ಯರಿಗೂ ನ್ಯಾಯ ದೊರಕಿಸಿಕೊಡುವಂತೆ ಮನವಿ ಮಾಡಿದರಲ್ಲದೆ ಸಚಿವರು ಪ್ರಧಾನಮಂತ್ರಿ ಬಾಯಿಂದ ಚಿಕ್ಕನಾಯಕನಹಳ್ಳಿ ತಾಲೂಕಿನಲ್ಲಿ ಶೇ.100 ರಷ್ಟು ಜಲಜೀವನ ಮೀಷನ್ ಯೋಜನೆಯ ಕೆಲಸವಾಗಿದೆ ಎಂದು ಸುಳ್ಳು ಹೇಳಿಸಿದ್ದಾರೆ. ಆದರೆ ವಾಸ್ತವವಾಗಿ ಹುಳಿಯಾರು ಪಟ್ಟಣದ ವಾರ್ಡ್‌ಗಳಿಗೆ ಬೋರನಕಣಿವೆ ಜಲಾಶಯದಿಂದ ನೀರು ಪೂರೈಸಿ ಎರಡು ತಿಂಗಳಾಗಿದೆ. ಪಟ್ಟಣದ ಜನರು ದಿನಬಳಕೆಗೂ ಹನಿ ನೀರಿಲ್ಲದೆ ದುಡ್ಡುಕೊಟ್ಟು ಖರೀಧಿಸುತ್ತಿದ್ದಾರೆ ಎಂದರು.

ಯಾವುದೆ ಒಂದು ಯೋಜನೆಯನ್ನು ಅನುಷ್ಟಾನಕ್ಕೆ ತರುವ ಮುಂಚೆ ಜನರಿಗಾಗುವ ಒಳಿತು, ಕೆಡುಕನ್ನು ಅರಿಯಬೇಕು. ಆದರೆ ಕುಡಿಯುವ ನೀರಿಗೆ ಮೀಟರ್ ಅಳವಡಿಸಿ ದುಡ್ಡು ವಸೂಲಿಗೆ ಚಿಂತನೆ ನಡೆಸಿರುವ ಭ್ರಷ್ಟ ಬಿಜೆಪಿ ಸರಕಾರಕ್ಕೆ ಜನರು ಸರಿಯಾದ ಪಾಠ ಕಲಿಸುತ್ತಾರೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಪಪಂ.ಸದಸ್ಯರಾದ ಸೈಯದ್ ಜಹೀರ್‌ಸಾಬ್, ಎಸ್‌ಆರ್‌ಎಸ್ ದಯಾನಂದ್, ಮಂಜುನಾಯ್ಕ್, ಮುಖಂಡರಾದ ಶಶಿಧರ್, ರಾಮಚಂದ್ರಯ್ಯ, ಸೈಯದ್ ಸಾದತ್, ರಾಘವೇಂದ್ರ, ಹಾರೂನ್‌ಷರಿಫ್, ಕೇಶವಾಪುರ ಕಿರಣ್‌ಕುಮಾರ್, ರವಿರಾಜ್, ಗೌಡಿ, ಗಣೇಶ್, ಶಿವನಂಜಪ್ಪ, ನಾಗರಾಜ್ ಹಾಜರಿದ್ದರು.

# 6ನೇ ತರಗತಿ ವಸತಿ ಶಾಲೆಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

ಬೆಳಗಾವಿ: 2023–2024 ನೇ ಸಾಲಿಗ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ಬೆಳಗಾವಿ ಜಿಲ್ಲೆಯಲ್ಲಿ ಮೊರರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ ಹಾಗೂ ಇತರೆ ವಸತಿ ಶಾಲೆಗಳ 6ನೇ ತರಗತಿಯ ದಾಖಲಾತಿಗಾಗಿ ಮಾರ್ಚ 12, 2023 ರಂದು ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ವರೆಗೆ ಪರೀಕ್ಷೆ ನಡೆಯಲಿದೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ವತಿಯಿಂದ ಪ್ರವೇಶ ಪರೀಕ್ಷೆ ಮತ್ತು ಆನ್‌ಲೈನ್ ಕೌನ್ಸಿಲಿಂಗ್ ನಡೆಸಲಾಗುವುದು.

ಪ್ರಸ್ತುತ 5ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಪಾಲಕರು/ಪೋಷಕರು ತಮ್ಮ ಮಕ್ಕಳನ್ನು 6ನೇ ತರಗತಿಗೆ ವಸತಿ ಶಾಲೆಗಳಿಗೆ ದಾಖಲಿಸಲು ಜನವರಿ 5, 2023 ರಿಂದ ಜನವರಿ 22 ರವರೆಗೆ ಅವಶ್ಯಕ ದಾಖಲಾತಿಗಳೊಂದಿಗೆ ತಮ್ಮ ಹತ್ತಿರದ ವಸತಿ ಶಾಲೆಗಳ ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪುನರ್ವಸತಿ ಕಾರ್ಯಕರ್ತರ ಹುದ್ದೆಗಳ ನೇಮಕಾತಿ

ಬೆಳಗಾವಿ : ಬೆಳಗಾವಿ ಜಿಲ್ಲೆಯ ಖಾನಾಪೂರ ಮತ್ತು ರಾಯಬಾಗ ತಾಲೂಕಿನ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪುನರ್ವಸತಿ ಕಾರ್ಯಕರ್ತರ (ವ್ಹಿ,ಆರ್,ಡಬ್ಲ್ಯೂ) ಹುದ್ದೆಗಳ ನೇಮಕಾತಿಗಾಗಿ ಆಯಾ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಅರ್ಹ ವಿಕಲಚೇತನ ಅಭ್ಯರ್ಥಿಗಳಿಂದ ಇಲಾಖೆಯ ಗ್ರಾಮೀಣ ಪುನರ್ವಸತಿ ಯೋಜನೆ ಅಡಿ ಮಾಸಿಕ 9000 ರೂಗಳ ಗೌರವಧನ ಆಧಾರದ ಮೇಲೆ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ವಿಕಲಚೇತನ ಅಭ್ಯರ್ಥಿಗಳು ಫೆಬ್ರವರಿ 17, 2023 ರ ಸಂಜೆ 5 ಗಂಟೆಗಳ ಒಳಗಾಗಿ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಪಂಚಾಯತ ಕಾರ್ಯಾಲಯ ಖಾನಾಪೂರ ಮತ್ತು ರಾಯಬಾಗ ಇವರಿಗೆ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಲು ಕೋರಲಾಗಿದೆ.

ಖಾನಾಪೂರ ತಾಲೂಕಿನ ನಾಗರಗಾಳಿ ಗ್ರಾಮ ಪಂಚಾಯಿತಿಯಲ್ಲಿ 1 ಹುದ್ದೆ ಖಾಲಿ ಇರುತ್ತದೆ. ರಾಯಬಾಗ ತಾಲೂಕಿನ ಬೆಕ್ಕೇರಿ(1), ಮೊರಬ(1) ಹಾಗೂ ಹುಬ್ಬರವಾಡಿ(1) ಗ್ರಾಮ ಪಂಚಾಯಿತಿಯಲ್ಲಿ ತಲಾ ಒಂದು ಹುದ್ದೆಗಳು ಖಾಲಿ ಇರುತ್ತವೆ.

**ಷರತ್ತುಗಳು:**

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ವಿಕಲಚೇತನರಾಗಿದ್ದು, ಶೇಕಡ 40 ರಷ್ಟು ವಿಕಲತೆ ಪ್ರಮಾಣ ಹೊಂದಿರತಕ್ಕದ್ದು, ಗ್ರಾಮ ಪಂಚಾಯತಿಗಳ ವ್ಯಾಪ್ತಿಗೊಳಪಟ್ಟಿರಬೇಕು. ಅರ್ಜಿದಾರರು ಕನಿಷ್ಠ ಎಸ್ಸೆಸ್ಸೆಲ್ಸಿ ಉತ್ತೀರ್ಣ ಅಥವಾ ಅನುತ್ತೀರ್ಣರಾಗಿದ್ದು, ಕಂಪ್ಯೂಟರ್ ಜ್ಞಾನ ಹೊಂದಿರಬೇಕು. ಮತ್ತು ಅರ್ಜಿ ಸಲ್ಲಿಕೆಯ ಕೊನೆಯ ದಿನಾಂಕ ಫೆಬ್ರುವರಿ 17, 2023 ಕ್ಕೆ ಕನಿಷ್ಠ 18 ವರ್ಷ ಹಾಗೂ ಗರಿಷ್ಠ 45 ವರ್ಷ ವಯೋಮಿತಿಯಲ್ಲಿರಬೇಕು.

ವಿಕಲಚೇತನ ಮಹಿಳಾ, ಪ. ಜಾತಿ ಮತ್ತು ಪ. ಪಂಗಡದ ಅಭ್ಯರ್ಥಿಗಳು ಹಾಗೂ ಇಲಾಖೆಯ ಯೋಜನೆಗಳ ಬಗ್ಗೆ ಜ್ಞಾನ ಹೊಂದಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ನಾಮದೇವ ಬಿಲ್ಕರ್ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೆಟ್ರಿಕ್–ನಂತರದ ವಿದ್ಯಾರ್ಥಿವೇತನ ಶುಲ್ಕ ವಿನಾಯಿತಿ, ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯ

ಬೆಳಗಾವಿ: ನಗರದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ, 2022–23ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಮೆಟ್ರಿಕ್–ನಂತರದ ವಿದ್ಯಾರ್ಥಿವೇತನ", "ಶುಲ್ಕ ವಿನಾಯಿತಿ", "ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆ", ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಜನವರಿ 31/2023ಕ್ಕೆ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಫೆ,28/2023 ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ https://ssp.postmatric.karnataka.gov.in ಕಾರ್ಯಕ್ರಮಗಳ ವಿವರ ಅರ್ಹತೆ ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಅದೇಶಗಳ ಬಗ್ಗೆ ಮಾಹಿತಿಗಾಗಿ ನೀಡಬೇಕಾದ ವೆಬ್ ಸೈಟ್ https://bcwd.karnataka.gov.in , ಇಲಾಖಾ ಸಹಾಯವಾಣಿ ಸಂಖ್ಯೆ : 8050770005. ಹಾಗೂ ಇಲಾಖಾ ಇಮೇಲ್ bcwdhelpline@gmail.com ಹಾಗೂ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಸಂಖ್ಯೆ: 080–35254757 ಇಮೇಲ್: postmetrichelp@karnataka.gov.in ಗೆ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳಾದ ಲಕ್ಷ್ಮಣ ಬಬಲಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉದ್ಯೋಗಾವಕಾಶ: ಖಾಸಗಿ ಕಂಪನಿಗಳಿಂದ ನೇರ ಸಂದರ್ಶನ

ಬೆಳಗಾವಿ: ಬೆಳಗಾವಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ವತಿಯಿಂದ ಫೆ. 10 ರಂದು ಬೆಳಿಗ್ಗೆ 10.30 ರಿಂದ ಮದ್ಯಾಹ್ನ 1.30 ಗಂಟೆಯುವರೆಗೆ ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಹಾಗೂ ಡಿಪ್ಲೋಮಾ (ಬಿಇ) ಯಾವುದೇ ಇನ್ನಿತರ ಪದವಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳಿಗಾಗಿ ಖಾಸಗಿ ಕಂಪನಿಗಳಿಂದ "ನೇರ ಸಂದರ್ಶನ" ವನ್ನು (WALK-IN-DRIVE), ಶ್ರೀನಗರ ಗಾರ್ಡನ್ ಹತ್ತಿರ ಡಾ. ಶಿವಬಸವ ಖಾಸಗಿ ಕೈಗಾರಿಕಾ ತರಬೇತಿ ಕೇಂದ್ರದಲ್ಲಿ ಆಯೋಜಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು https://forms.gle/1jDyteGzbEf8YvfX6 ಈ ವೆಬ್‌ಸೈಟ್‌ನಲ್ಲಿ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ.

ಅಭ್ಯರ್ಥಿಗಳಿಗೆ ಉದ್ಯೋಗಾವಕಾಶವು ಉಚಿತವಾಗಿದ್ದು, ಇನ್ನುಳಿದ ಯಾವುದೇ ಸೌಲಭ್ಯಗಳು ಇರುವುದಿಲ್ಲ.

ಸದರಿ ಸಂದರ್ಶನದಲ್ಲಿ ಪ್ರತಿಷ್ಠಿತ ಖಾಸಗಿ ಕಂಪನಿಗಳು ಭಾಗವಹಿಸಲಿವೆ. ಅರ್ಹ ಹಾಗೂ ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಳಿಗಾಗಿ ಮೇಲ್ಕಂಡ ವೈಬ್‌ಸೈಟಿಗೆ ಭೇಟಿ ನೀಡಬಹುದು,

ಹಾಗೂ ಮೊಬೈಲ್ ಸಂಖ್ಯೆ: 8147685479/ 8105234686 ಗೆ ಸಂಪರ್ಕಿಸಬಹುದು, ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿಕ್ಷಣದ ಜೊತೆ ಮಕ್ಕಳಿಗೆ ಸಂಸ್ಕಾರ ನೀಡಿ: ಬಸವರಾಜೇಂದ್ರ ಶ್ರೀ

ಮುಗಳಖೋಡ: ಮಕ್ಕಳು ಭಾರತದ ಉತ್ತಮ ಪ್ರಜೆಗಳಾಗಲು ಶಿಕ್ಷಣದ ಜೊತೆ ಮನೆಯಲ್ಲಿ ಒಳ್ಳೆಯ ನಡೆ, ನುಡಿ, ಆಚಾರ, ವಿಚಾರದ ಜೊತೆ ಸಂಸ್ಕಾರ ಬೆಳೆಸಿ ಎಂದು ಅಚಲೇರಿ ಜಿಡಗಾ ಮಠದ ಪೀಠಾಧಿಪತಿ ಶ್ರೀ ಬಸವರಾಜೇಂದ್ರ ಮಹಾಸ್ವಾಮಿಗಳು ಹೇಳಿದರು.



ಅವರು ಪಟ್ಟಣದ ಉಣ್ಣಿಬಸವೇಶ್ವರ ಅನುದಾನಿತ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯ 33ನೇ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ 7ನೇ ವರ್ಗದ ವಿದ್ಯಾರ್ಥಿಗಳ ಬೀಳ್ಕೊಡುವ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಪರಿಸರದ ಬಗ್ಗೆ ಕಾಳಜಿ, ಗುರು ಹಿರಿಯರ ಮೇಲೆ ಗೌರವ, ದೇಶಪ್ರೇಮ ಮತ್ತಿತರ ಮೌಲ್ಯಗಳನ್ನು ಮಕ್ಕಳಲ್ಲಿ ಬೆಳೆಸುವುದರ ಮೂಲಕ ಅರ್ಥಪೂರ್ಣವಾದ ಶಿಕ್ಷಣದ ಜೊತೆ ಉತ್ತಮ ಸಂಸ್ಕಾರ ನೀಡುವುದು ಪಾಲಕರ ಆದ್ಯ ಕರ್ತವ್ಯವಾಗಿದೆ ಎಂದು ಹೇಳಿದರು.

ಮುಖ್ಯ ಅಥಿತಿಯಾಗಿ ಆಗಮಿಸಿದ ಮಾಜಿ ಉಪಮುಖ್ಯಮಂತ್ರಿ ಶ್ರೀ ಲಕ್ಷ್ಮಣ ಸವದಿ ಅವರ ಮಗನಾದ ಸಮಾಜ ಸೇವಕ ಚಿದಾನಂದ ಸವದಿ ಮಾತನಾಡಿ ವ್ಯವಸ್ಥೆ ಬದಲಾದಂತೆ ನಮ್ಮ ಕೌಶಲ್ಯವನ್ನು ವೃದ್ಧಿಸಿಕೊಳ್ಳಬೇಕು.

ಮಾಹಿತಿ ತಂತ್ರಜ್ಞಾನ ತೀವ್ರವಾಗಿ ಬೆಳೆಯುತ್ತಿದ್ದು ಕೌಶಲ್ಯಯುತ ವ್ಯಕ್ತಿಗೆ ಬಾರಿ ಬೇಡಿಕೆ ಇದೆ ಕಾರಣ ಶಿಕ್ಷಣದ ಜೊತೆ ಎಲ್ಲ ಮಕ್ಕಳು ಒಳ್ಳೆಯ ಕೌಶಲ್ಯಗಳನ್ನು ಬೆಳೆಸಿಕೊಳ್ಳಿ ಎಂದು ಹೇಳಿದರು.

ನಂತರ ಹಾರೂಗೇರಿ ನಾರಗೊಂಡ ಇಂಟರ್ನ್ಯಾಷನಲ್ ಸ್ಕೂಲ್ ಅಧ್ಯಕ್ಷ ವಿವೇಕ ನಾರಗೊಂಡ ಮಾತನಾಡಿ ಶಿಕ್ಷಣವು ವ್ಯಕ್ತಿತ್ವವನ್ನು ರೂಪಿಸಿ ಮನಸ್ಸನ್ನು ಬಲಪಡಿಸುತ್ತದೆ, ಜ್ಞಾನವನ್ನು ಹೆಚ್ಚಿಸಿ ನಮ್ಮನ್ನು ಸ್ವತಂತ್ರಗೊಳಿಸುತ್ತದೆ.

ಅಜ್ಞಾನವನ್ನು ಹೋಗಲಾಡಿಸಿ ನಮ್ಮೆಲ್ಲರ ಉಜ್ವಲ ಭವಿಷ್ಯಕ್ಕಾಗಿ ಶಿಕ್ಷಣ ಅತ್ಯಗತ್ಯ ಸಾಧನವಾಗಿದೆ. ಅಂತಹ ಶಿಕ್ಷಣವನ್ನು ಪಡೆದು ನಾವೆಲ್ಲರೂ ಜೀವನದಲ್ಲಿ ಏನಾದರೂ ದೊಡ್ಡ ದೊಡ್ಡ ಒಳ್ಳೆಯ ಸಾಧನೆ ಮಾಡಬೇಕೆಂದು ಮಕ್ಕಳಿಗೆ ಹೇಳಿದರು.

ಅಧ್ಯಕ್ಷಸ್ಥಾನವನ್ನು ಸಂಸ್ಥೆಯ ಅಧ್ಯಕ್ಷ ಗೌಡಪ್ಪ ಖೇತಗೌಡರ ವಹಿಸಿಕೊಂಡಿದ್ದರು.

ಈ ಸಂದರ್ಭದಲ್ಲಿ ಗಜಾನನ ಕುಲಿಗೋಡ ಹಾಗೂ ಸೌಪರ್ಣಿಕಾ ಖೇತಗೌಡರ ಅವರಿಗೆ ಆದರ್ಶ ವಿದ್ಯಾರ್ಥಿ, ವಿದ್ಯಾರ್ಥಿನಿ ಪ್ರಶಸ್ತಿ ನೀಡಿ ಗೌರವಿಸಲಾಯಿತು. ನಂತರ ಮಕ್ಕಳಿಂದ ಮನರಂಜನಾ ಕಾರ್ಯಕ್ರಮಗಳು ನಡೆದವು.

ಈ ಕಾರ್ಯಕ್ರಮದಲ್ಲಿ ಮಲ್ಲಿಕಾರ್ಜುನ ಖಾನಗೌಡರ, ಸಿ.ಆರ್ಪಿ. ಬಿ.ಸಿ.ಬಾಗೆನ್ನವರ, ಸಚ್ಚಿನ ಬೂರ್ಲಿ, ಮಾಹಾತೇಶ ಠಕ್ಕನ್ನವರ, ಸುರೇಶ್ ಜಂಬಗಿ, ಅಶೋಕ ಕೊಪ್ಪದ, ಮಹಾಂತೇಶ ಯರಡತ್ತಿ, ಶ್ರೀಮತಿ ಲತಾ ಹುದ್ದಾರ, ಮಂಗಲಾ ಪಣದಿ ಸೇರಿದಂತೆ ಸಂಸ್ಥೆಯ ಆಡಳಿತ ಮಂಡಳಿಯ ಸರ್ವ ಸದಸ್ಯರು ಹಾಗೂ ಸಿಬ್ಬಂದಿಯವರು ಉಪಸ್ಥಿತರಿದ್ದರು.

# ಹುಚ್ಚುನಾಯಿಯಿಂದ 25 ಜನರ ಮೇಲೆ ದಾಳಿ: ಆಸ್ಪತ್ರೆಗೆ ಶಾಸಕ ಭೇಟಿ

ಬಳ್ಳಾರಿ : ನಗರದ ಬೀದಿ ನಾಯಿಗಳ ಮಿತಿಮೀರಿದ್ದು ಅದರೊಡನೆ ಹುಚ್ಚು ನಾಯಿಗಳ ಹೆಚ್ಚಳವಾಗಿದೆ. ಹಾವಳಿ ತೀವ್ರವಾಗಿ ಮಹಿಳೆಯರು ಮತ್ತು ಮಕ್ಕಳು ಸೇರಿ 25ಕ್ಕೂ ಹೆಚ್ಚು ಜನರು ಆಸ್ಪತ್ರೆಯಲ್ಲಿ ದಾಖಲಾಗಿದ್ದು ಚಿಕಿತ್ಸೆ ಪಡೆಯುತ್ತಿದ್ದಾರೆ. ವಿಷಯ ತಿಳಿದ ಗಾಯಗೊಂಡವರನ್ನು ನೋಡಲು ವಿಮ್ಸ್ ಆಸ್ಪತ್ರೆಗೆ ಬಳ್ಳಾರಿ ಗ್ರಾಮಾಂತರ ಜನಪ್ರಿಯ ಶಾಸಕರಾದ ಬಿ.ನಾಗೇಂದ್ರ ಅವರು ಭೇಟಿ ಮಾಡಿ ಪರಿಶೀಲಿಸಿದರು. ರೋಗಿಗಳಿಗೆ ಹಣ್ಣು ಬ್ರೆಡ್ ವಿತರಣೆ ಮಾಡಿದರು. ನಂತರ ಮಾಧ್ಯಮದವರೊಂದಿಗೆ ಮಾತನಾಡಿದ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ರೇಬಿಸ್‌ಗೆ ತುತ್ತಾಗಿರುವ ನಾಯಿ ಕೌಲ್



ಬಜಾರ್ ಭಾಗದಲ್ಲಿ 29, 30, 33ನೇ ವಾರ್ಡ್‌ನಲ್ಲಿ ಮತ್ತು ವಿದ್ಯಾನಗರದಲ್ಲಿ ನಾಯಿ ಸಂಚರಿಸುತ್ತಾ ಸುಮಾರು 25 ರಿಂದ 30 ಜನರಿಗೆ ಆ ನಾಯಿ ಕಚ್ಚಿದಂತೆ ತಿಳಿದುಬಂದಿದೆ ಎಂದರು.

ವಿಮ್ಸ್ ನಿರ್ದೇಶಕರಾದ ಗಂಗಾಧರ್ ಗೌಡ, ಎಚ್.ಓ.ಡಿ ಡಾ.ಪ್ರಭು, ಆರ್.ಎಂ.ಓ ರವಿ ಭೀಮಪ್ಪ ಅವರು ಹಾಗೂ ಸಿಬ್ಬಂದಿ ವರ್ಗದವರು ಕಳೆದ ಎರಡು ದಿನಗಳಿಂದ ದಾಖಲಾದ ರೋಗಿಗಳಿಗೆ ವ್ಯಾಕ್ಸಿನೇಷನ್ ಕೊಡುವುದರ ಮೂಲಕ ರೇಬಿಸ್ ರೋಗ ಬರದಂತೆ ಮುನ್ನೆಚ್ಚರಿಕೆಯಿಂದ ಚಿಕಿತ್ಸೆ ನೀಡುತ್ತಿದ್ದಾರೆ ಎಂದರು. ನಮ್ಮ ಮಹಾನಗರ ಪಾಲಿಕೆ ಆಯುಕ್ತರೊಂದಿಗೆ ಮಾತನಾಡಿ ಆ ನಾಯಿಗೆ ರೇಬಿಸ್ ರೋಗ ಏನಾದರೂ ಇದ್ದರೆ ಸುಮಾರು ಎರಡು ತಿಂಗಳದವರೆಗೆ ರೋಗಿಗಳನ್ನು ಅಬ್ಸರ್ವೇಶನ್‌ನಲ್ಲಿ ಇಡಲಾಗುತ್ತದೆ.ಸುಮಾರು 25 ಜನ ರೋಗಿಗಳು ದಾಖಲಾಗಿದ್ದು ಅವರಿಗೆ ನಾಯಿ ಕಚ್ಚಿದ 1ನೇ ದಿನ, 3ನೇ ದಿನ, 7ನೇ ದಿನ, 14ನೇ ದಿನ ಮತ್ತು 30ನೇ ದಿನ ಒಟ್ಟು ಐದು ಬಾರಿ ವ್ಯಾಕ್ಸಿನೇಷನ್ ಕೊಡಲಾಗುತ್ತದೆ.



ಹುಳಿಯಾರು: ಹೋಬಳಿಯ ಗಾಣಧಾಳು ವಲಯದ ಹೊಯ್ಸಳಕಟ್ಟೆ ಕಾರ್ಯಕ್ಷೇತ್ರದ ಕರಿಯಮ್ಮ ಅವರ ಮಗಳಾದ ಸಿರಿ ಅವರಿಗೆ ಹೈಪರ್‌ಲೂಮಿಯ ಕಾಯಿಲೆ ಇದ್ದು ಇವರಿಗೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ 20,000 ರೂ ಸಹಾಯ ಧನವನ್ನು ಯೋಜನಾಧಿಕಾರಿಗಳಾದ ಯಲ್.ಬಿ.ಪ್ರೇಮಾನಂದ್ ವಿತರಣೆ ಮಾಡಿದರು. ಮೇಲ್ವಿಚಾರಕರಾದ ನರಸಿಂಹರಾಜು ಮತ್ತಿತರರು ಇದ್ದರು.

# ಸ್ಕೌಟ್ಸ್, ಗೈಡ್ಸ್ ವಿದ್ಯಾರ್ಥಿಗಳಿಗೆ ರಾಜ್ಯ ಪುರಸ್ಕಾರ



ತಾಳಿಕೋಟೆ: ಭಾರತೀಯ ಸ್ಕೌಟ್ಸ್ & ಗೈಡ್ಸ್‌ನ ಕಬ್ಸ್ & ಬುಲ್ ಬುಲ್ ವಿಭಾಗದಲ್ಲಿ ವಿಜಯಪುರ ಜಿಲ್ಲೆಯಿಂದ ಭಾಗವಹಿಸಿದ್ದ 4 ವಿದ್ಯಾರ್ಥಿಗಳಲ್ಲಿ ಇಬ್ಬರು ವಿದ್ಯಾರ್ಥಿಗಳು ರಾಜ್ಯ ಪುರಸ್ಕಾರ ಪಡೆದು-ಕೊಂಡು ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ತಾಳಿಕೋಟೆಯ ವಿಕಾಸ್ ಪಬ್ಲಿಕ್ ಸ್ಕೂಲ್‌ನ ವಿದ್ಯಾರ್ಥಿನಿ ಸಿಂಚನಾ ಎಂ ರಾಯಗೊಂಡ ಬುಲ್ ಬುಲ್ ವಿಭಾಗದಲ್ಲಿ ಹಾಗೂ ವಿಜಯಪುರದ ಲಿಟಲ್ ಫ್ಲಾವರ್ ಪೂರ್ವ ಪ್ರಾಥಮಿಕ ಶಾಲೆಯ ಶಂಭು ಹಿರೇಮಠ ಕಬ್ಸ್ ವಿಭಾಗದಲ್ಲಿ ಆಯ್ಕೆಗೊಂಡಿದ್ದರಿಂದ ದಿ. 9 ರಂದು ಬೆಂಗಳೂರಿನಲ್ಲಿ ರಾಜ್ಯಪಾಲರಾದ ಥಾವರಚಂದ್ ಗೆಹ್ಲೋಟ್ ಅವರು ಈ ಇಬ್ಬರು ವಿಧ್ಯಾರ್ಥಿಗಳಿಗೆ ರಾಜ್ಯ ಪುರಸ್ಕಾರವನ್ನು ನೀಡಿ ಗೌರವಿಸಿದ್ದಾರೆ.

ಈ ವಿಧ್ಯಾರ್ಥಿಗಳ ಜೊತೆಯಾಗಿ ಜಿಲ್ಲೆಯಿಂದ ಭಗತಿ ಬಾಗೇವಾಡಿ, ರಾಘವಿ ಮಾನ್ವಿ ಭಾಗವಹಿಸಿದ್ದರು.

ವಿದ್ಯಾರ್ಥಿಗಳ ಸಾಧನೆಗೆ ವಿಕಾಸ ಪಬ್ಲಿಕ್ ಸ್ಕೂಲ್‌ನ ಗೌರವಾಧ್ಯಕ್ಷರಾದ ಡಾ.ವಿಜಯಕುಮಾರ ಕಾರ್ಚಿ, ಅಧ್ಯಕ್ಷರಾದ ರಾಮನಗೌಡ ಬಾಗೇವಾಡಿ, ಕಾರ್ಯದರ್ಶಿ ವ್ಹಿ.ಆಯ್.ಪಾಟೀಲ, ಮುಖ್ಯಗುರುಗಳಾದ ಎಸ್.ಬಿ.ಬಿರಾದಾರ, ಫ್ಲಾಕ್ ಲೀಡರ್ ಶ್ರೀಮತಿ ಮಹರ್ಷಿಲ್ ಆರ್, ಕಬ್ಸ್ ಮಾಸ್ಟರ್ ಎನ್. ಎಲ್.ನಾಗರಾಳ, ಶಿಕ್ಷಕ ಸಿಬ್ಬಂದಿವರ್ಗದವರು ಅಭಿನಂದನೆ ಸಲ್ಲಿಸಿದ್ದಾರೆ.

# ಗ್ರಾಮ ಸಂಚಾರ ನಡೆಸಿ ಹಕ್ಕು ಪತ್ರ ವಿತರಣೆ

ಬೀದರ್ (ಫೆ.09): ಮಾಜಿ ಸಚಿವರು, ಜೆಡಿಎಸ್ ಶಾಸಕಾಂಗ ಪಕ್ಷದ ಉಪನಾಯಕರು, ಜೆಡಿಎಸ್ ಕೋರ್ ಕಮಿಟಿಯ ಅಧ್ಯಕ್ಷರು, ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರು ಕ್ಷೇತ್ರದ ರಂಜೋಳಖೇಣಿ ಗ್ರಾಮಕ್ಕೆ ಭೇಟಿ ನೀಡಿ, ಗ್ರಾಮ ಸಂಚಾರ ನಡೆಸಿ, ಗ್ರಾಮಸ್ಥರ ಅಹವಾಲು ಸ್ವೀಕರಿಸಿ, ಕಾರಂಜಾ ಸಂತ್ರಸ್ತರ ಮನೆಗಳ ಹಕ್ಕು ಪತ್ರ ವಿತರಿಸಿದರು.

ರಂಜೋಳಖೇಣಿ ಗ್ರಾಮಕ್ಕೆ ಗುರುವಾರ ಬೆಳಗ್ಗೆ ಆಗಮಿಸಿದ ಶಾಸಕ ಬಂಡೆಪ್ಪ ಖಾಶೆಂಪುರ್ ರವರು ಮೊದಲಿಗೆ ಗ್ರಾಮದ ಹೊರವಲಯದಲ್ಲಿರುವ ಮಡಿವಾಳ ಮಾಚಿದೇವರ ಮೂರ್ತಿ, ಬೊಮ್ಮಗೊಂಡೇಶ್ವರ ನಾಮಫಲಕ, ಬಸವೇಶ್ವರ ವೃತ್ತಗಳಿಗೆ ಮಾಲಾರ್ಪಣೆ ಮಾಡಿದರು. ಶಾಸಕರನ್ನು ಗ್ರಾಮಸ್ಥರು ಬಾಜಾ ಬಜೇಂತ್ರಿಗಳೊಂದಿಗೆ ಪಟಾಕಿ ಸಿಡಿಸಿ ಸಂಭ್ರಮದಿಂದ ಬರಮಾಡಿಕೊಂಡರು.

ನಂತರ ಗ್ರಾಮದ ಗ್ರಾಮ ಪಂಚಾಯತಿ ಕಛೇರಿಯಲ್ಲಿ ಕರ್ನಾಟಕ ನೀರಾವರಿ ನಿಯಮಿತದ ವತಿಯಿಂದ ಹಮ್ಮಿಕೊಂಡಿದ್ದ ಕಾರಂಜಾ ನೀರಾವರಿ ಯೋಜನೆಯಲ್ಲಿ ಭಾಗಶಃ ಮುಳುಗಡೆಯಲ್ಲಿ ಬರುವ ರಂಜೋಳಖೇಣಿ ಗ್ರಾಮದ ಪುನರ್ವಸತಿ ಕೇಂದ್ರ 1 ಮತ್ತು 2ರ ಹಕ್ಕುಪತ್ರಗಳ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ, ಸಾಂಕೇತಿಕವಾಗಿ ಹಕ್ಕು ಪತ್ರಗಳನ್ನು ವಿತರಿಸಿದರು.



ಬಳಿಕ ಮಾತನಾಡಿದ ಅವರು, ಕಾರಂಜಾ ಸಂತ್ರಸ್ತರ ಪರವಾಗಿ ನಾನು ಸದಾಕಾಲವೂ ಧ್ವನಿ ಎತ್ತುತ್ತಾ ಬಂದಿದ್ದೇನೆ. ಅವಕಾಶ ಸಿಕ್ಕಾಗಲೆಲ್ಲಾ ಸದನದಲ್ಲಿ ಕಾರಂಜಾ ಸಂತ್ರಸ್ತರ ನ್ಯಾಯಕ್ಕಾಗಿ ಆಗ್ರಹಿಸಿದ್ದೇನೆ. ಕಾರಂಜಾ ಸಂತ್ರಸ್ತ ರೈತರು ಕಳೆದ ಅನೇಕ ತಿಂಗಳುಗಳಿಂದ ನಡೆಸುತ್ತಿರುವ ಹೋರಾಟದ ಸ್ಥಳಕ್ಕೆ ಸರ್ಕಾರದ ಯಾರೊಬ್ಬರೂ ಹೋಗಿ ಮನವಿ ಸ್ವೀಕರಿಸಿಲ್ಲ. ಮಾಜಿ ಸಿಎಂ ಕುಮಾರಸ್ವಾಮಿರವರು, ನಾವು ಭೇಟಿ ನೀಡಿ ಮನವಿ ಸ್ವೀಕರಿಸಿದ್ದೇವೆ. ಇದೇ ವಿಷಯಕ್ಕೆ ಸಂಬಂಧಿಸಿದಂತೆ ಅನೇಕ ಬಾರಿ ಮುಖ್ಯಮಂತ್ರಿಗಳಿಗೂ ಮನವಿ ಮಾಡಿದ್ದೇನೆ ಎಂದರು.

ಕಾರಂಜಾ ಸಂತ್ರಸ್ತರಿಗೆ ಹಕ್ಕು ಪತ್ರ ವಿತರಣೆಯಲ್ಲಿರುವ ತಾಂತ್ರಿಕ ಸಮಸ್ಯೆಗಳನ್ನು ಕೂಡಲೇ ಪರಿಹರಿಸಬೇಕು. ಸಂಬಂಧಿಸಿದ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಲೆಕ್ಕಾಧಿಕಾರಿ, ಕಂದಾಯ ನಿರೀಕ್ಷಕರು, ಕಾರಂಜಾ ನೀರಾವರಿ ನಿಗಮದ ಅಧಿಕಾರಿಗಳು ಮತ್ತು ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳ ನೇತೃತ್ವದಲ್ಲಿ ಜಂಟಿ ಸಮಿತಿ ರಚನೆ ಮಾಡಿಕೊಂಡು ಕೂಡಲೇ ಪರಿಹಾರ ಕಂಡುಕೊಳ್ಳಬೇಕು. ಎಲ್ಲರಿಗೂ ನ್ಯಾಯಯುತವಾದ ಪರಿಹಾರ ಒದಗಿಸಬೇಕೆಂದು ಸ್ಥಳದಲ್ಲೇ ಇದ್ದ ತಹಶಿಲ್ದಾರರಿಗೆ ಶಾಸಕ ಬಂಡೆಪ್ಪ ಖಾಶೆಂಪುರ್ ರವರು ತಿಳಿಸಿದರು.

ಈ ಸಂದರ್ಭದಲ್ಲಿ ಬೀದರ್ ತಹಶಿಲ್ದಾರ ಬಿ.ವಿ ಮಹತ್, ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ್ ಪಾಟೀಲ್, ಕಾರಂಜಾ ನೀರಾವರಿ ನಿಗಮದ ಸಹಾಯಕ ಕಾರ್ಯಪಾಲಕ ಅಭಿಯಂತರ ವಿಘ್ನೇಶ್ವರ ಶಿವಯೋಗಿ, ಪಿಎಸ್‌ಐ ಸುವರ್ಣ, ಕಂದಾಯ ನಿರೀಕ್ಷಕ ಶೀಶೈಲ್, ಪಿಡಿಒ ಶಶಿಕಲಾ, ಗ್ರಾಮ ಪಂಚಾಯತಿ ಅಧ್ಯಕ್ಷ ಜಗನ್ನಾಥ ಖೇಣಿ, ಉಪಾಧ್ಯಕ್ಷೆ ಜೈಶೀಲಾ ಗುರುನಾಥ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಫಲಾನುಭವಿಗಳು, ಸ್ಥಳೀಯ ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

# ಜೆಡಿಎಸ್ ಸೇರಿದ ವಿವಿಧ ಗ್ರಾಮಗಳ ಯುವಕರು



ಬೀದರ್ : ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಸಂಗೊಳಗಿ, ಬಗದಲ್, ಸಿಕೇಂದ್ರಪೂರ ಸೇರಿದಂತೆ ವಿವಿಧ ಗ್ರಾಮಗಳ ಅನೇಕ ಜನ ಯುವಕರು ಮಾಜಿ ಸಚಿವರು, ಜೆಡಿಎಸ್ ಶಾಸಕಾಂಗ ಪಕ್ಷದ ಉಪನಾಯಕರು, ಜೆಡಿಎಸ್ ಕೋರ್ ಕಮಿಟಿಯ ಅಧ್ಯಕ್ಷರು, ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರ ಸಮ್ಮುಖದಲ್ಲಿ ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಯಾದರು.

ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಖಾಶೆಂಪುರ್ ಪಿ ಗ್ರಾಮದ ಹೊರವಲಯದಲ್ಲಿರುವ ತಮ್ಮ ನಿವಾಸದ ಆವರಣದಲ್ಲಿ ಗುರುವಾರ ಬೆಳಗ್ಗೆ ಜೆಡಿಎಸ್ ಶಾಲು ಹೊದಿಸಿ ಪಕ್ಷದ ಧ್ವಜ ನೀಡುವ ಮೂಲಕ ವಿವಿಧ ಗ್ರಾಮಗಳ ಯುವಕರನ್ನು ಶಾಸಕ ಬಂಡೆಪ್ಪ ಖಾಶೆಂಪುರ್ ರವರು ಜೆಡಿಎಸ್ ಪಕ್ಷಕ್ಕೆ ಬರಮಾಡಿಕೊಂಡರು.

ಈ ಸಂದರ್ಭದಲ್ಲಿ ಬಗದಲ್ ನ ನೂರ್ ಅಲಿ ಷಾ, ಮಜೀದ್ ಬೈ, ಮನ್ಸೂರ್, ರಿಯಾಜ್, ಜಾನೋದಿನ್ ಪಟೇಲ್, ಹುಸೇನ್ ಅಲಿ, ಆಶೀಪ್, ಸಿಕೇಂದ್ರಪೂರದ ಭೀಮರಾವ್, ಮೋಹಿಸ್, ಮೈಬೂಬ್, ಖಾಸಿಂ, ಸೈಲಾನಿ, ತುಕ್ಕರಾಮ್, ರುಬೇನಾ, ಜಾಫರ್, ಸಂಗೊಳಗಿಯ ಶರಣು ಜಮಾದಾರ, ಯಾಕೂಬ್ ಬೈ, ಜಬ್ಬರ್ ಸಾಬ್, ಮಲ್ಲಪ್ಪ, ವಿಠಲ್, ಅಕೊಂಳ್, ಕರುಣ್, ಸುನಿಲ್, ಪಾದಪ್ಪ, ಮಲ್ಲು, ರಾಜಪ್ಪ, ರಾಮಕೃಷ್ಣ, ಬಾಬುರಾವ್, ಜಲೀಲ್ ಸೇರಿದಂತೆ ಅನೇಕರಿದ್ದರು.

# ಹಾಸ್ಯ ಕಾರ್ಯಕ್ರಮ



ಬೆಳಗಾವಿ: ನಗರದ ಹಾಸ್ಯಕೂಟ ಮತ್ತು ಕನ್ನಡ ಸಾಹಿತ್ಯ ಭವನ ವಿಶ್ವಸ್ತ ಮಂಡಳಿ ಸಂಯುಕ್ತ ಆಶ್ರಯದಲ್ಲಿ ಇದೇ ದಿ. 11 ಶನಿವಾರದಂದು "ಹ್ಯಾಂಗ ನಗಿಸಬೇಕ್ರಿ" ಎಂಬ ವಿನೂತನ ಕಾರ್ಯಕ್ರಮವನ್ನು ಚೆನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಾಹಿತ್ಯ ಭವನದಲ್ಲಿ ಹಮ್ಮಿಕೊಂಡಿದ್ದಾರೆ.

ಈ ಕಾರ್ಯಕ್ರಮದಲ್ಲಿ ನೀವೂ ಭಾಗವಹಿಸಬಹುದಾಗಿದೆ. ಅಧ್ಯಕ್ಷತೆಯನ್ನು ಹಿರಿಯ ಕವಿ ಪ್ರೊ. ಎಂ. ಎಸ್. ಇಂಚಲ ಅವರು ವಹಿಸಲಿದ್ದಾರೆ. ಹೇಗೆ ನಗಿಸುವುದೆಂದು ನಗಿಸುತ್ತಲೇ ಹೇಳಲಿದ್ದಾರೆ ಪ್ರೊ. ಜಿ. ಕೆ. ಕುಲಕರ್ಣಿ, ಜಿ. ಎಸ್ ಸೋನಾರ. ಗುಂಡೇನಟ್ಟಿ ಮಧುಕರ ಪ್ರಸ್ಥಾವಿಕ ನುಡಿಗಳನ್ನಾಡಲಿದ್ದಾರೆ. ಶ್ರೀಮತಿ ಸುಪ್ರಿಯಾ ದೇಶಪಾಂಡೆಯವರು ಪ್ರಾಯೋಜಕತ್ವವನ್ನು ವಹಿಸಿಕೊಂಡಿದ್ದಾರೆ. ಕೆ. ತಾನಾಜಿ ನಿರೂಪಿಸಲಿದ್ದಾರೆ.

# ಮಿಂತ್ರಾದ ರಾಯಭಾರಿಗಳ ಸಮೂಹಕ್ಕೆ ತಮನ್ನಾ

ಹುಬ್ಬಳ್ಳಿ : ಖ್ಯಾತ ನಟಿ ಮತ್ತು ಫ್ಯಾಷನಿಸ್ತಾ ತಮನ್ನಾ ಭಾಟಿಯಾ ಅವರು ಮಿಂತ್ರಾ ಬ್ರಾಂಡ್ ರಾಯಭಾರಿಯಾಗಿ ತನ್ನ ಸಹಯೋಗವನ್ನು ಪ್ರಕಟಿಸಿದ್ದು ಇದು ಭಾರತದ ಮುಂಚೂಣಿಯ ಫ್ಯಾಷನ್, ಬ್ಯೂಟಿ ಮತ್ತು ಜೀವನಶೈಲಿ ಶಾಪಿಂಗ್ ತಾಣಗಳಲ್ಲಿ ಒಂದರ ಸೆಲೆಬ್ರಿಟಿ ಕೋಷೆಂಟ್ ಮತ್ತಷ್ಟು ಹೆಚ್ಚಿಸಿದೆ.

ತಮನ್ನಾ, ಸದ್ಯದಲ್ಲೇ ಪ್ರಸಾರವಾಗಲಿರುವ ಮಿಂತ್ರಾದ ಹೊಸ ಬ್ರಾಂಡ್ ಅಭಿಯಾನದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಮಿಂತ್ರಾದ ಬ್ರಾಂಡ್ ರಾಯಭಾರಿಯಾಗಿ ಮುಂದುವರಿದ ವಿಜಯ್ ದೇವರಕೊಂಡ ಅವರೊಂದಿಗೆ ತಮ್ಮ ಫ್ಯಾಷನ್ ಭಾವನೆಯನ್ನು ಪೂಜಿಸುವ ಜನಪ್ರಿಯ ಈ ನಟ-ರು ಅವರ ನಟನೆಯ ಪ್ರತಿಭೆಯೊಂದಿಗೆ ಮಿಂತ್ರಾಗೆ ವಿಶಿಷ್ಟ ಮತ್ತು ಪರಿಣಾಮಕಾರಿ ಬ್ರಾಂಡ್ ಅಭಿಯಾನ ಸೃಷ್ಟಿಸಲು ಸಜ್ಜಾಗಿದ್ದಾರೆ.

ಮಿಂತ್ರಾದ ಹೊಚ್ಚಹೊಸ ಬ್ರಾಂಡ್ ಅಭಿಯಾನ, 'ಬಿ ಎಕ್ಸ್ಟ್ರಾ ಆರ್ಡಿನರಿ ಎವೆರಿಡೇ'ನಲ್ಲಿ ಫ್ಯಾಷನ್ ಪ್ರಮುಖವಾಗಿದ್ದು ಇದು ದೇಶಾದ್ಯಂತ ಫ್ಯಾಷನ್ ಎದುರು ನೋಡುವ ಕೊಳ್ಳುಗರನ್ನು ದೃಷ್ಟಿಯಲ್ಲಿರಿಸಿಕೊಂಡು ಮಿಂತ್ರಾವನ್ನು ಜನರಿಗೆ ಅವರ ಪ್ರತಿನಿತ್ಯದ ಫ್ಯಾಷನ್ ಮತ್ತು ಉನ್ನತೀಕರಿಸುವ ಮೂಲಕ ಅವರಿಗೆ ಬ್ರಾಂಡೆಡ್ ಫ್ಯಾಷನ್‌ನ ಅತ್ಯುತ್ತಮವಾದುದು ಲಭ್ಯವಾಗುವಂತೆ




ಮಾಡುತ್ತದೆ.

ಸೂಪರ್ ಹಿಟ್ ಚಲನಚಿತ್ರಗಳನ್ನು ನೀಡಿರುವ ತಮನ್ನಾ ಅವರ ವೈವಿಧ್ಯತೆ, ನಟನಾ ಸಾಮರ್ಥ್ಯ ಮತ್ತು ನಟನಾ ಶೈಲಿ, ತಾಜಾ ಫ್ಯಾಷನ್ ಶೈಲಿಯೊಂದಿಗೆ ಅವರಿಗೆ ಭಾರತದಾದ್ಯಂತ ಅಭಿಮಾನಿಗಳನ್ನು ಸಂಪಾದಿಸಿಕೊಟ್ಟಿದೆ. ತಮನ್ನಾ ಅವರು ರಣ್‌ಬೀರ್ ಕಪೂರ್, ಕಿಯಾರಾ ಆಡ್ವಾಣಿ ಮತ್ತು ವಿಜಯ್ ದೇವರಕೊಂಡ ಅವರಂತಹ ಮಿಂತ್ರಾ ಪ್ರತಿನಿಧಿಸುವ ಸೂಪರ್‌ಸ್ಟಾರ್‌ಗಳ ಪಟ್ಟಿಯಲ್ಲಿ ಸೇರಿಕೊಳ್ಳಲಿದ್ದು ದೇಶದ ಸಿನಿಮಾ ಕ್ಷೇತ್ರದೊಂದಿಗೆ ಈ ಪ್ಲಾಟ್‌ಫಾರಂನ ಸಂಪರ್ಕ ಹೆಚ್ಚಿಸಲಿದ್ದಾರೆ ಮತ್ತು ಮಿಂತ್ರಾವನ್ನು ಅತ್ಯಾಧುನಿಕ ಟ್ರೆಂಡ್ ನೋಟಗಳು ಮತ್ತು ಫ್ಯಾಷನ್‌ನ ಆದ್ಯತೆಯ ತಾಣವಾಗಿಸಲಿದ್ದಾರೆ.

ವಿಜಯ್ ದೇವರಕೊಂಡ ಅವರನ್ನು 2021ರಲ್ಲಿ ಮಿಂತ್ರಾದ ಬ್ರಾಂಡ್ ರಾಯಭಾರಿ ಎಂದು ಪ್ರಕಟಿಸಲಾಯಿತು.

ಅಂದಿನಿಂದ ಅವರು ಯಶಸ್ವಿಯಾಗಿ ಬ್ರಾಂಡ್ ಅನ್ನು ಬೆಂಬಲಿಸುತ್ತಿದ್ದು ಪುರುಷರ ದಿರಿಸುಗಳ ವಿಭಾಗದಲ್ಲಿ ನೆರೇಟಿವ್‌ಗಳನ್ನು ಉತ್ತೇಜಿಸುತ್ತಿದ್ದಾರೆ ಮತ್ತು ಈ ಪ್ಲಾಟ್‌ಫಾರಂ ಅನ್ನು ಭಾರತದ ಫ್ಯಾಷನ್ ಆಸಕ್ತಿಯ ಗ್ರಾಹಕರ ಬೇಡಿಕೆಗಳನ್ನು ಪೂರೈಸಲು ಪ್ರಚಾರ ಮಾಡುತ್ತಿದ್ದಾರೆ. ಅವರ ಕಲೆ, ಫ್ಯಾಷನ್ ವ್ಯಕ್ತಿತ್ವ ಮತ್ತು ಅವರ ಸಾಮಾಜಿಕ ಮಾಧ್ಯಮಗಳಲ್ಲಿ ಪ್ರತಿನಿತ್ಯದ ಕಂಟೆಂಟ್ ಅವರಿಗೆ ದೇಶಾದ್ಯಂತ ಅಪಾರ ಅಭಿಮಾನಿಗಳನ್ನು ತಂದುಕೊಟ್ಟಿದೆ.

ಬ್ರಾಂಡ್ ರಾಯಭಾರಿಗಳ ಪ್ರಕಟಣೆ ಕುರಿತು ಮಿಂತ್ರಾದ ಸಿಎಂಒ ಸುಂದರ್ ಬಾಲಸುಬ್ರಮಣಿಯನ್, "ತಮನ್ನಾ ಅವರನ್ನು ನಮ್ಮ ಬ್ರಾಂಡ್ ರಾಯಭಾರಿಯಾಗಿ ಸೇರ್ಪಡೆ ಮಾಡಿಕೊಳ್ಳುವುದನ್ನು ಪ್ರಕಟಿಸಲು ನಾವು ಬಹಳ ಸಂತೋಷ ಹೊಂದಿದ್ದೇವೆ, ಮತ್ತು ನಾವು ಪರಿಣಾಮಕಾರಿ ಸಹಯೋಗ ನಿರೀಕ್ಷಿಸುತ್ತಿದ್ದೇವೆ. ಫ್ಯಾಷನ್ ನಾವು ಮಾಡುವ ಕೆಲಸದ ಕೇಂದ್ರದಲ್ಲಿರುತ್ತದೆ. ತಮನ್ನಾ ಅವರು ದಕ್ಷಿಣ ಹಾಗೂ ಅದರ ಆಚೆಗೂ ಮಿಂತ್ರಾ ಪ್ರತಿನಿಧಿಸಲು ಮಿಂತ್ರಾದ ತಾರಾಗಣ ಸೇರಿರುವುದು ಈ ಅಭಿಯಾನವನ್ನು ಮತ್ತಷ್ಟು ದೊಡ್ಡದಾಗಿಸಿದೆ. ಪುರುಷರ ದಿರಿಸುಗಳ ವಿಭಾಗದಲ್ಲಿ ವಿಜಯ್ ಅವರೊಂದಿಗೆ ನಮ್ಮ ಸಹಯೋಗ ಅಪಾರ ಯಶಸ್ಸು ಪಡೆದಿದೆ ಮತ್ತು ದೇಶಾದ್ಯಂತ ಅವರ ಅಭಿಮಾನಿಗಳೊಂದಿಗೆ ಆಳವಾದ ಬಾಂಧವ್ಯ ನಿರ್ಮಿಸುವುದನ್ನು ಮುಂದುವರಿಸಿದೆ" ಎಂದರು.

ಈ ಸಹಯೋಗದ ಕುರಿತು ತಮನ್ನಾ ಭಾಟಿಯಾ, "ಫ್ಯಾಷನ್ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವ ಬ್ರಾಂಡ್‌ನೊಂದಿಗೆ ಸಹಯೋಗ ಬಹಳ ಉತ್ಸಾಹಕಾರಿಯಾಗಿದೆ! ಮಿಂತ್ರಾದ ಬ್ರಾಂಡ್ ಅಭಿಯಾನಗಳ ಭಾಗವಾಗುವುದು ಬಹಳ ಸಂತೋಷವಾಗಿದ್ದು ದೇಶಾದ್ಯಂತ ನನ್ನ ಅಭಿಮಾನಿಗಳಿಗೆ ಮತ್ತಷ್ಟು ಲಭ್ಯತೆ ನೀಡುತ್ತದೆ ಮತ್ತು ಅವರಿಗೆ ಮಿಂತ್ರಾದ ಮೂಲಕ ಪ್ರತಿನಿತ್ಯದ ಎತ್ತರಿಸಲು ನೆರವಾಗಲಿದೆ" ಎಂದರು.

# ನೇಕಾರ ಸಮ್ಮಾನ ಯೋಜನೆಯಡಿ ನೇಕಾರರು ಹಾಗೂ ಕಾರ್ಮಿಕರಿಗೆ ಆರ್ಥಿಕ ನೆರವು

ಬೆಳಗಾವಿ : ವಿದ್ಯುತ್ ಮಗ್ಗ ವಿದ್ಯುತ್ ಮಗ್ಗ ಹಾಗೂ ಮಗ್ಗಪೂರ್ವ ಘಟಕಗಳ ನೇಕಾರರು ಹಾಗೂ ಕಾರ್ಮಿಕರಿಗೆ ತಲಾ ರೂ.5,000/- ಗಳ ವಾರ್ಷಿಕ ಆರ್ಥಿಕ ನೆರವು ನೀಡುವ ನೇಕಾರ ಸಮ್ಮಾನ(ವಿದ್ಯುತ್ ಮಗ್ಗ) ಯೋಜನೆಯನ್ನು ಜಾರಿಗೊಳಿಸಲಾಗಿರುತ್ತದೆ.

ಸದರಿ ಯೋಜನೆಯಡಿ ನೆರವು ಪಡೆಯಲು ನೇಕಾರರ ಘಟಕಗಳು ವಿದ್ಯುತ್ ಮಗ್ಗ ಗಣತಿಯಲ್ಲಿ ನೋಂದಾಯಿಸಿಕೊಂಡಿರಬೇಕು. ಸದರಿ ಗಣತಿಯನ್ನು ಎ.ಐ.ಎಮ್.ಎಸ್ ಸಂಸ್ಥೆಯಿಂದ ಕೈಗೊಳ್ಳಲಾಗುತ್ತಿದ್ದು, ಗಣತಿಯಲ್ಲಿ ನೋಂದಾಯಿಸಲು ಬಿಟ್ಟು ಹೋದ ಘಟಕದವರು ಯಾವುದೇ ಮದ್ಯವರ್ತಿಗಳ ಆಸೆ-ಆಮಿಷಕ್ಕೆ ಒಳಗಾಗದೇ, ನೇರವಾಗಿ ಈ ಕಛೇರಿಯನ್ನು ಸಂಪರ್ಕಿಸಲು ತಿಳಿಸಲಾಗಿದೆ.

ನೇಕಾರ ಸಮ್ಮಾನ ಯೋಜನೆಯಡಿ ಆರ್ಥಿಕ ನೆರವನ್ನು ಪಡೆಯಲು ಯಾವುದೇ ಅರ್ಜಿ ಅಥವಾ ಆನ್‌ಲೈನ್ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ ಹಾಗೂ ಯಾವುದೇ ಶುಲ್ಕ ಇರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಈ ಕಛೇರಿ ದೂರವಾಣಿ ಸಂ-ಖ್ಯೆ: 0831-2950674 ಗೆ ಸಂಪರ್ಕಿಸಬಹುದು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆ ಜಿಲ್ಲಾ ಪಂಚಾಯತ್ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೊಪ್ಪಳ ಜಿಲ್ಲಾ ರಜತ ಮಹೋತ್ಸವ: ಲಾಂಛನ, ಕಾರ್ಯಕ್ರಮದ ಸ್ವರೂಪಕ್ಕೆ ಸಲಹೆಗಳ ಆಹ್ವಾನ

ಕೊಪ್ಪಳ : ಕೊಪ್ಪಳ ಜಿಲ್ಲೆಯಾಗಿ 25 ವರ್ಷಗಳು ಪೂರೈಸಿದ ಪ್ರಯುಕ್ತ ರಜತ ಮಹೋತ್ಸವ ಕಾರ್ಯಕ್ರಮಕ್ಕೆ ಲಾಂಛನ ಸಿದ್ದಪಡಿಸುವ ಹಾಗೂ ಕಾರ್ಯಕ್ರಮದ ಆಚರಣೆ ಬಗ್ಗೆ ಸಲಹೆ ಅಭಿಪ್ರಾಯ ನೀಡಲು ಕೊಪ್ಪಳ ಜಿಲ್ಲಾಡಳಿತವು ಅವಕಾಶ ಕಲ್ಪಿಸಿದೆ.

ಕೊಪ್ಪಳ ಉತ್ಸವ ಆಚರಣೆಯ ಬಗ್ಗೆ ಈಗಾಗಲೇ ಚರ್ಚೆ ನಡೆಸಲಾಗುತ್ತಿದೆ. ಲಾಂಛನ ಹೇಗಿರಬೇಕು. ಕಾರ್ಯಕ್ರಮದ ಸ್ವರೂಪ ಹೇಗಿರಬೇಕು ಎಂಬುದರ ಬಗ್ಗೆ ಕೊಪ್ಪಳ ಜಿಲ್ಲೆಯ ಸಾಹಿತಿಗಳು, ಕಲಾವಿದರು, ಸಾಂಸ್ಕೃತಿಕ ಕ್ಷೇತ್ರದ ಗಣ್ಯರು, ಕೊಪ್ಪಳ ಜಿಲ್ಲೆ ರಚನೆಯಾಗಲು ಶ್ರಮಿಸಿದ ಹಿರಿಯ ಹೋರಾಟಗಾರರು ಹಾಗೂ ಸಾರ್ವಜನಿಕರಿಗೆ ಅವಕಾಶ ನೀಡಲಾಗಿದ್ದು, ಇದಕ್ಕೆ ಸಂಬಂಧಿಸಿದ ಸಲಹೆ ಮತ್ತು ಸೂಚನೆಗಳ ಸಂಕ್ಷಿಪ್ತ ಮಾಹಿತಿಯನ್ನು ಸಾಫ್ಟ್ ಕಾಪಿಯನ್ನು ಇ-ಮೇಲ್ koppal25years@gmail.com ಗೆ ಸಲ್ಲಿಸಲು ಹಾಗೂ ಹಾರ್ಡ್ ಕಾಪಿಯನ್ನು ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕೊಪ್ಪಳ ಇವರ ಕಚೇರಿಗೆ ಫೆಬ್ರವರಿ 13 ರೊಳಗಾಗಿ ಸಲ್ಲಿಸುವಂತೆ ಅಪರ ಜಿಲ್ಲಾಧಿಕಾರಿಗಳಾದ ಸಾವಿತ್ರಿ ಬಿ.ಕಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾನ್ ಪ್ಯಾರಾಮೆಡಿಕ್ ಅಲ್ಪಾವಧಿ ಸರ್ಟಿಫಿಕೇಟಿ ಕೋರ್ಸ್ : ಅರ್ಜಿ ಆಹ್ವಾನ

ಕೊಪ್ಪಳ : ಕೊಪ್ಪಳ ಸಮಾಜ ಕಲ್ಯಾಣ ಇಲಾಖೆಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಯುವಕ, ಯುವತಿಯರಿಗೆ ನಾನ್ ಪ್ಯಾರಾಮೆಡಿಕ್ ಅಲ್ಪಾವಧಿ ಸರ್ಟಿಫಿಕೇಟ್ ಕೋರ್ಸ್ಗಳಿಗೆ ಅರ್ಜಿ ಸಲ್ಲಿಸಲು 10ನೇ ತರಗತಿ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗ ಯುವಕ, ಯುವತಿಯರಿಗೆ ಎನ್.ಎ.ಬಿ.ಹೆಚ್.ನಿಂದ ಮಾನ್ಯತೆ ಪಡೆದ ಹೆಚ್.ಸಿ.ಜಿ.ಎಲ್ ಹಾಸ್ಪಿಟಲ್ ಮೂಲಕ ಶೇ.75 ಉದ್ಯೋಗ ಖಾತರಿಯೊಂದಿಗೆ 10ನೇ ತರಗತಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ನಾನ್ ಪ್ಯಾರಾಮೆಡಿಕಲ್ ಅಲ್ಪಾವಧಿ ಸರ್ಟಿಫಿಕೇಟ್ ಕೋರ್ಸಗಳಿಗೆ ಮೂರು ತಿಂಗಳ ವಸತಿ ಸಹಿತ ತರಬೇತಿ ನೀಡಲಾಗುತ್ತಿದ್ದು, ಅರ್ಹ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಲು ಫೆಬ್ರವರಿ 13 ರವರಿಗೆ ಅವಕಾಶವನ್ನು ಕಲ್ಪಿಸಲಾಗಿದ್ದು, ಅಭ್ಯರ್ಥಿಗಳು ಪ್ಯಾರಮೆಡಿಕಲ್ ಅಸಿಸ್ಟೆಂಟ್ (ನಾನ್ ಪ್ಯಾರಾಮೆಡಿಕಲ್) ಅಭ್ಯರ್ಥಿಗಳು 10ನೇ ತರಗತಿ ಉತ್ತೀರ್ಣರಾಗಿರಬೇಕು. ತರಬೇತಿ ಅವಧಿ 3 ತಿಂಗಳಾಗಿದ್ದು, ಅಭ್ಯರ್ಥಿಗಳು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು. ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ನಿಗದಿತ ನಮೂನೆಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದಿರಬೇಕು.

ಅಂಗವಿಕಲ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ವೈದ್ಯಕೀಯ ಧೃಡೀಕರಣ ಪತ್ರವನ್ನು ಅರ್ಜಿ ಸಲ್ಲಿಸುವ ಮುಂಚಿತವಾಗಿ ಹೊಂದಿರಬೇಕು. ವಿದ್ಯಾರ್ಥಿನಿಲಯ, ಕ್ರೈಸ್ ವಿದ್ಯಾರ್ಥಿನಿಲಯ, ಸಫಾಯಿ ಕರ್ಮಚಾರಿ ಮೀಸಲಾತಿ ಅಡಿ ಅರ್ಜಿ ಸಲ್ಲಿಸುವ ಅಭ್ಯರ್ಥಿ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರ ಪಡೆದಿರಬೇಕು. ಅಭ್ಯರ್ಥಿಗಳು 18 ರಿಂದ 45 ವರ್ಷ ವಯೋಮಿತಿಯಲ್ಲಿರಬೇಕು ಹಾಗೂ ಕುಟುಂಬದ ವಾರ್ಷಿಕ ಆದಾಯ ರೂ.5 ಲಕ್ಷಕ್ಕೆ ಮೀರಿರಬಾರದು.

ಹೆಚ್ಚಿನ ವಿವರಗಳಿಗಾಗಿ ಇಲಾಖೆ ವೆಬ್‌ಸೈಟ್ sww.sw.kar.nic.in ನ್ನು ಮತ್ತು ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಕೊಪ್ಪಳ ಮತ್ತು ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಕೊಪ್ಪಳ, ಯಲಬುರ್ಗಾ, ಗಂಗಾವತಿ, ಕುಷ್ಟಗಿ ಹಾಗೂ ತಾಲೂಕಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಕುಷ್ಟಗಿ ಮತ್ತು ಗಂಗಾವತಿ ರವರನ್ನು ಸಂಪರ್ಕಿಸುವುದು ಎಂದು ಕೊಪ್ಪಳ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂಗವಿಕಲ ವಿದ್ಯಾರ್ಥಿನಿಯರ ವಸತಿ ನಿಲಯ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: ನಗರದ ಶ್ರೀ ರೇಣುಕಾ ದೇವಿ ಉದ್ಯೋಸ್ತ ಅಂಗವಿಕಲ ಹಾಗೂ ಅಂಗವಿಕಲ ವಿದ್ಯಾರ್ಥಿನಿಯರ ವಸತಿ ನಿಲಯ ಪ್ರವೇಶಕ್ಕೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಯಾವುದೇ ಉದ್ಯೋಗದಲ್ಲಿರುವ ವಿದ್ಯಾರ್ಥಿನಿಯರು, ವಿವಿಧ ಶಾಲಾ ಕಾಲೇಜುಗಳಲ್ಲಿ ಪ್ರವೇಶ ಪಡೆದ ಹಾಗೂ ತರಬೇತಿ ಪಡಯುತ್ತಿರುವ ವಿದ್ಯಾರ್ಥಿನಿಯರಿಗೆ ವಸತಿ ನಿಲಯ ಪ್ರವೇಶವನ್ನು ಪಡೆಯಬಹುದು. ಜಿಲ್ಲೆಯ ಆಸಕ್ತ ಉದ್ಯೋಗಸ್ತ ಅಂಗವಿಕಲರು, ಅಂಗವಿಕಲ ವಿದ್ಯಾರ್ಥಿನಿಯರು ಅರ್ಜಿಗಳನ್ನು ಸಲ್ಲಿಸಬಹುದು.

ಪ್ರವೇಶ ಪಡೆದಂತಹ ಅಂಗವಿಕಲ ವಿದ್ಯಾರ್ಥಿನಿಯರಿಗೆ ವಸತಿ, ಊಟ, ಹಾಗೂ ಹೊದಿಕೆಯನ್ನು ಉಚಿತವಾಗಿ ನೀಡಲಾಗುವುದು.

ಅರ್ಜಿ ಸಲ್ಲಿಸವ ಕೊನೆಯ ದಿನಾಂಕ ಫೆ.20 2023 ರೊಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ 9448974894 ಸಂಖ್ಯೆಯನ್ನು ಸಂಪರ್ಕಿಸಬಹುದು ಎಂದು ಸಂಚಾಲಕರಾದ ಸವಿತಾ ಎಸ್. ಕಾಂಬಳೆ ಅವರು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಧರ್ಮಾಚರಣೆಯಿಂದ ವ್ಯಕ್ತಿತ್ವಕ್ಕೆ ಬೆಲೆ ನೆಲೆ: ಶ್ರೀ ರಂಭಾಪುರಿ ಜಗದ್ಗುರು

ದಾವಣಗೆರೆ : ಭೌತಿಕ ಬದುಕು ಸಮೃದ್ಧಗೊಂಡಂತೆ ಆಂತರಿಕ ಜೀವನ ಪರಿಶುದ್ಧಗೊಳ್ಳಬೇಕಾಗಿದೆ. ಸತ್ಯದ ತಳಹದಿಯ ಮೇಲೆ ಧರ್ಮ ಸಂಸ್ಕೃತಿ ಗಟ್ಟಿಗೊಳ್ಳಬೇಕಾಗಿದೆ. ಸತ್ಯ ಶುದ್ಧವಾದ ಧರ್ಮಾಚರಣೆಯಿಂದ ವ್ಯಕ್ತಿತ್ವಕ್ಕೆ ಬೆಲೆ ನೆಲೆ ಪ್ರಾಪ್ತವಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ತಾಲೂಕಿನ ಹಿರೇತೊಗಲೇರಿಯಲ್ಲಿ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಆಹಾರ ನೀರು ದೈಹಿಕ ವಿಕಾಸಗೊಳಿಸಿದರೆ ಧರ್ಮ ಬದುಕನ್ನು ವಿಕಾಸಗೊಳಿಸಿ ಅಭಿವೃದ್ಧಿಯತ್ತ ಕೊಂಡೊಯ್ಯುತ್ತದೆ.



ವಿವಾದ ವಿಮರ್ಶೆಗಳು ಸಂಸ್ಕೃತಿಯ ಮೇಲೆ ಹೊಸ ಬೆಳಕು ಮೂಡಿಸಬೇಕಲ್ಲದೇ ನಾಸ್ತಿಕರನ್ನಾಗಿ ಮಾಡಬಾರದು. ಸಮಾಜದಲ್ಲಿ ಸಂಘಟನೆಗಳು ನಡೆಯಬೇಕಲ್ಲದೇ ಸಂಘರ್ಷಗಳು ನಡೆಯಬಾರದು. ಆಡುವ ಮಾತು ಉಳಿಸಿಕೊಂಡು ಬಾಳುವುದೇ ನಿಜವಾದ ಧರ್ಮ. ಶ್ರೀ ಜಗದ್ಗುರು ರೇಣುಕಾಚಾರ್ಯರು ವಿಶ್ವಬಂಧುತ್ವದ ಆದರ್ಶ ಧರ್ಮ ಸೂತ್ರಗಳನ್ನು ಬೋಧಿಸಿದ್ದಾರೆ ಎಂದರು. ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ದಿನಾಂಕ 5–3–2023 ರಂದು ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ, ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವ ಹಾಗೂ ಶ್ರೀ ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ. ಅಂದು 2023ರ ಶ್ರೀ ಪೀಠದ ಅತ್ಯುನ್ನತ ಶ್ರೀ ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿಯನ್ನು ನಿಕಟಪೂರ್ವ ಮುಖ್ಯ ಮಂತ್ರಿ ಹಿರಿಯ ರಾಜಕೀಯ ಮುತ್ಸದ್ದಿ ಬಿ.ಎಸ್.ಯಡಿಯೂರಪ್ಪನವರಿಗೆ ದಿನಾಂಕ 5ರಂದು ಪ್ರದಾನ ಮಾಡಲಾಗುವುದೆಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಕಣ್ವಕುಪ್ಪಿ ಗವಿಮಠದ ಡಾ॥ ನಾಲ್ವಡಿ ಶಾಂತಲಿಂಗ ಶಿವಾಚಾರ್ಯ ಸ್ವಾಮಿಗಳು ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ದಿನಾಂಕ 3–3–2023 ರಿಂದ 7–3–2023ರ ವರೆಗೆ ಜರುಗಲಿರುವ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಜಾತ್ರಾ ಮಹೋತ್ಸವದ ಪ್ರಥಮ ಪ್ರಕಟಣೆ ಬಿಡುಗಡೆ ಮಾಡಿದರು. ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆ ಅಧ್ಯಕ್ಷರಾದ ಮುಕ್ತಿಮಂದಿರದ ವಿಮಲ ರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಸಮಾರಂಭವನ್ನು ಉದ್ಘಾಟಿಸಿದರು. ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು, ಬುಕ್ಕಸಾಗರದ ಕರಿಸಿದ್ಧೇಶ್ವರ ವಿಶ್ವಾರಾಧ್ಯ ಶಿವಾಚಾರ್ಯ ಸ್ವಾಮಿಗಳು ಉಪದೇಶಾಮೃತ ನೀಡಿದರು.

ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ ಜರುಗಿತು. ಕಾರ್ಯಕ್ರಮ ಸಂಯೋಜಿಸಿದ ಹೆಚ್.ಎಂ.ವಿಶ್ವನಾಥಯ್ಯ ಸ್ವಾಗತಿಸಿದರು.

ಇದಕ್ಕೂ ಮುನ್ನ ಶ್ರೀ ರಂಭಾಪುರಿ ಜಗದ್ಗುರುಗಳ ಇಷ್ಟಲಿಂಗ ಮಹಾಪೂಜಾ ಜರುಗಿತು. ಆಗಮಿಸಿದ ಭಕ್ತ ಸಮೂಹ ಪಾಲ್ಗೊಂಡು ಶ್ರೀ ಜಗದ್ಗುರುಗಳ ಆಶೀರ್ವಾದ ಪಡೆದರು.

## ಫೆ.12ರಿಂದ ವಿವಿಧ ಕಾರ್ಯಕ್ರಮ

ಬೆಳಗಾವಿ: ತಾಲೂಕಿನ ಕಣಬರಗಿಯ ಆರಾಧ್ಯದೇವರಾದ ಶ್ರೀ ಸಿದ್ದೇಶ್ವರ ದೇವಾಲಯದ ನವೀಕೃತ ಭವ್ಯಕಟ್ಟಡದ ಉದ್ಘಾಟನೆ, ವಾಸ್ತುಶಾಂತಿ ಹಾಗೂ ಕಳಸಾರೋಹಣ ನಿಮಿತ್ಯ ಫೆ. 12ರಿಂದ 14ರವರೆಗೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದುದೇವಸ್ಥಾನ ಮಂಡಳಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

12ರಂದು ಬೆಳಗ್ಗೆ ಗ್ರಾಮದೇವಿ ಶ್ರೀ ಮಹಾಲಕ್ಷ್ಮೀ ದೇವಸ್ಥಾನದಿಂದ ಶ್ರೀ ಸಿದ್ದೇಶ್ವರ ದೇವಸ್ಥಾನದವರೆಗೆ ಗ್ರಾಮದ ಭಕ್ತ ಮಂಡಳಿ ವತಿಯಿಂದ ಶ್ರೀ ಸಿದ್ದೇಶ್ವರ ಕಳಸ ಮೆರವಣಿಗೆಯಲ್ಲಿ ಮುತ್ತೈದೆಯರು ಕುಂಭ ಹೊತ್ತು ಸಾಗಲಿದ್ದಾರೆ.

13ರಂದು ಬೆಳಗ್ಗೆ 9ರಿಂದ 12ರವರೆಗೆ ಸಿದ್ದೇಶ್ವರ ಮಂದಿರದ ಗಣೇಶ ಮಂದಿರದಲ್ಲಿ ಗಣಹೋಮ ಮತ್ತು ಸಂಜೆ 6 ಗಂಟೆಯಿಂದರಾತ್ರಿ 9 ಗಂಟೆವರೆಗೆರಾಕ್ಷೋಘ್ನ ಹೋಮ ಹಮ್ಮಿಕೊಳ್ಳಲಾಗಿದೆ.

14ರಂದು ಬೆಳಗ್ಗೆ 6.30ರಿಂದ 11ಗಂಟೆವರೆಗೆ ನವೀಕೃತ ಶ್ರೀ ಸಿದ್ದೇಶ್ವರ ಕಟ್ಟಡದ ವಾಸ್ತುಶಾಂತಿ, ಕಳಸಾರೋಹಣ, ಅತಿಥಿಗಳ ಸತ್ಕಾರ ಸಮಾರಂಭ ಹಾಗೂ ಮಧ್ಯಾಹ್ನ 12ರಿಂದ ಸಾಯಂಕಾಲ 4 ಗಂಟೆವರೆಗೆ ಮಹಾಪ್ರಸಾದ ವ್ಯವಸ್ಥೆ ಮಾಡಲಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಕೋರಲಾಗಿದೆ.

## ಲಿಂಗಾಯತ ಸ್ಮಶಾನ ಭೂಮಿ ಪರಿಶೀಲನೆ




ಬೆಳಗಾವಿ: ಬೆಳಗಾವಿ ಉತ್ತರಕ್ಷೇತ್ರದ ಶಾಸಕ ಅನಿಲ ಬೆನಕೆರವರುಕಣಬರ್ಗಿಯ ಸಾಗರ ನಗರದಲ್ಲಿ ಕುಡಿಯುವ ನೀರಿನ ಕೊಳವೆ ಬಾವಿ ಅಳವಡಿಸುವ ಕಾರ್ಯಕ್ಕೆ ಚಾಲನೆ ನೀಡಿದರು. ನಂತರದಲ್ಲಿ ಕಣಬರ್ಗಿಯ ಲಿಂಗಾಯತ ಸಮುದಾಯದ ಬೇಡಿ–ಕೆಯಂತೆ ಕಂಪೌಂಡಕಾಮಗಾರಿ, ನೀರಿನ ವ್ಯವಸ್ಥೆ ಹಾಗೂ ಇತರ ಮೂಲಭೂತ ಸೌಕರ್ಯಗಳ ಕುರಿತು ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಶಾಸಕರೊಂದಿಗೆ ಲಿಂಗಾಯತ ಸಮಾಜ ರುದ್ರಭೂಮಿ ಸಮಿತಿ ಸದಸ್ಯರು, ರಾಘವೇಂದ್ರಪಾಟೀ, ಗುರುದೇವ ಪಾಟೀಲ ಹಾಗೂ ಸಮಾಜದ ಇತರರು ಉಪಸ್ಥಿತರಿದ್ದರು.

## ಯುವ ಮುಖಂಡನ ನೇತೃತ್ವದಲ್ಲಿ: ಜಿಲ್ಲಾಧಿಕಾರಿಗಳಿಗೆ ಮನವಿ

ಕೊಲ್ಹಾರ:ಪಟ್ಟಣದಲ್ಲಿ ಸುಮಾರು 30–35 ವರ್ಷಗಳ ಕಾಲದಿಂದ ಸಿಕ್ಯಾಬ್ ಶಿಕ್ಷಣ ಸಂಸ್ಥೆಯೊಂದು ಕಾರ್ಯನಿರ್ವಹಿಸುತ್ತಿದ್ದು, ಈ ಸಂಸ್ಥೆಯ ಅಡಿಯಲ್ಲಿ ಮಾಧ್ಯಮಿಕ ಹಾಗೂ ಪದವಿ ಪೂರ್ವ ಎರಡು ಶಿಕ್ಷಣ ಕಲಿಕಾ ಶಾಲೆಗಳು ಮಕ್ಕಳಿಗೆ ಅನುಕೂಲಕರವಾದ ಶಿಕ್ಷಣವನ್ನು ಪಡೆದುಕೊಳ್ಳಲು ಶಿಕ್ಷಣ ಇಲಾಖೆಯಿಂದ ಅನುಮತಿಯನ್ನು ಪಡೆದು ಕಾರ್ಯನಿರ್ವಹಿಸುತ್ತಿದ್ದು, ಆದರೆ, ಸದರಿ ಸಿಕ್ಯಾಬ ಸಂಸ್ಥೆಯ ಅಧ್ಯಕ್ಷರಾದಿಯಾಗಿ ನಿರ್ದೇಶಕ ಮಂಡಳಿಯ ಸರ್ವ ಸದಸ್ಯರು ಇದುವರೆಗೂ ಯಾವುದೇ ರೀತಿಯ ಸದಸ್ಯರ ಸಭೆಯನ್ನು ಕರೆಯದೇ ಮತ್ತು ಚುಣಾವಣೆಯನ್ನು ನಡೆಸದೇ ತಮ್ಮತಮ್ಮಲ್ಲಿಯೇ ಅಧಿಕಾರವನ್ನು ಹಂಚಿಕೆ ಮಾಡಿಕೊಳ್ಳುವ ಒಪ್ಪಂದವನ್ನು ನಡೆಸುತ್ತಿದ್ದು



ಇದು ತಮ್ಮ ಗಮನಕ್ಕೆ ತರಲು ಬಯಸುತ್ತೇನೆ.

ತಮ್ಮ ಇಲಾಖೆಯ ಅಡಿಯಲ್ಲಿ ಯಾವುದೇ ಒಂದು ಸಂಘ ಸಂಸ್ಥೆ ನೊಂದಣಿಯಾದರೆ ಆ ಸಂಸ್ಥೆಯ ಆಡಳಿತ ವರ್ಗಕ್ಕೆ ಪ್ರತಿ ಐದು ವರ್ಷಕ್ಕೊಮ್ಮೆ ಅಥವಾ ಸರಕಾರದ ನಿಯಮಾವಳಿ ಪ್ರಕಾರ ಸಾರ್ವಜನಿಕ ಪ್ರಕಟಣೆ ಮೂಲಕ ಚುಣಾವಣೆಯನ್ನು ನಡೆಸಬೇಕಾಗಿದ್ದು. ಆದರೆ ಕೊಲ್ಹಾರದಲ್ಲಿರುವ ಸಿಕ್ಯಾಬ ಶಿಕ್ಷಣ ಸಂಸ್ಥೆಗೆ ಈಗಿರುವ ಆಡಳಿತ ಮಂಡಳಿಯ ನಿರ್ಧಾರಗಳು ನಮಗೆ ತಪ್ಪು ಎಂದು ಕಂಡುಬರುತ್ತಿದ. ಕಾರಣ ಈಗಿನ ಆಡಳಿತ ಮಂಡಳಿಯ ಅಧ್ಯಕ್ಷ – ಪ್ರಧಾನಕಾರ್ಯದರ್ಶಿ ನಿರ್ದೇಶಕ ಮಂಡಳಿ ಸದಸ್ಯರಲ್ಲಿ ಯಾರಾದರೂ ರಾಜಿನಾಮ ಸಲ್ಲಿಸಿದರೆ ಮರಣ ಹೊಂದಿದರೆ ಅವರು ಪ್ರತಿನಿಧಿಸುವ ಸ್ಥಾನಗಳಿಗೆ ತಾವುಗಳೇ ಸಭೆ ಸೇರಿ ತಮ್ಮ ಮಕ್ಕಳನ್ನು ಅಥವಾ ಸಹೋದರರನ್ನು ನೇಮಕ ಮಾಡಿಕೊಳ್ಳುವ ವಂಶಾಡಳಿತ ಪದ್ಧತಿಯನ್ನು ಅನುಸರಿಸುತ್ತಿದ್ದಾರೆ. ಇದು ಸರಕಾರದ ನಿಯಮದ ಪ್ರಕಾರ ಕಾನೂನು ಬಾಹಿರವಾಗುತ್ತದೆ. ಅಂತಹ ಪ್ರಸಂಗವೊಂದು ಈಗ ಕೊಲ್ಹಾರ ಪಟ್ಟಣದ ಸಿಕ್ಯಾಬ ಶಿಕ್ಷಣ ಸಂಸ್ಥೆಯಲ್ಲಿ ನಡೆದಿದೆ ಎನ್ನುವದನ್ನು ಗಮನಕ್ಕೆ ತರಲು ನಾವುಗಳು ಬಯಸುತ್ತೇವೆ.

ಆದ್ದರಿಂದ ವಂಶಾಡಳಿತ ವ್ಯವಸ್ಥೆಯಲ್ಲಿ ತೊಡಗಿರುವ ವಿಜಯಪೂರ ಜಿಲ್ಲೆಯ ಕೊಲ್ಹಾರ ತಾಲೂಕಿನ ಕೊಲ್ಹಾರ ಪಟ್ಟಣದ ಸಿಕ್ಯಾಬ ಸಂಸ್ಥೆಯಲ್ಲಿ ತಂದೆಯ ನಂತರ ಮಗ, ಮಗನ ನಂತರ ಆತನ ಮಗ, ಅಧಿಕಾರ ನಡೆಸುವ ಮತ್ತು ಸಂಸ್ಥೆಯಲ್ಲಿ ನೌಕರಿ ಮಾಡುವ ಕೆಟ್ಟ ಸಂಪ್ರದಾಯಕ್ಕೆ ತಾವುಗಳು ಇತಿಶ್ರೀ ಹಾಡಬೇಕು ಹಾಗೂ ಈಗಾಗಲೇ ಆಡಳಿತ ಮಂಡಳಿಯವರು ಮಾಡಿರುವ ನೇಮಕವನ್ನು ರದ್ದಾಗೊಳಿಸಿ. ಸಾರ್ವಜನಿಕ ಪ್ರಕಟಣೆ ಮೂಲಕ ಆಯಾ ಸ್ಥಾನಗಳಿಗೆ ಚುನಾವಣೆ ನಡೆಯುವಂತೆ ಕ್ರಮ ಕೈಗೊಳ್ಳಬೇಕೆಂದು. ಪಟ್ಟಣದ ಮುಸ್ಲಿಂ ನಾಗರಿಕರು ಮಾನ್ಯ ಜಿಲ್ಲಾಧಿಕಾರಿಗಳಿಗೆ ಮಂಗಳವಾರ ರಂದು ಮನವಿ ಸಲ್ಲಿಸಿದರು

ಈ ವೇಳೆಯಲ್ಲಿ ಪಟ್ಟಣದ ಡೊಂಗ್ರಿ ಗಿರಗಾಂವಿ, ಚಾಂದ್ ಗಿರಗಾಂವಿ, ಶಫೀಕ್ ಹೊನ್ನವಾಡ, ನಿಯಾಜ್ ಮಕಂದರ್, ರಫೀಕ್ ಪಠಾಣ,ಬುಡ್ಡಾ ಗಾಟ್ನೆ ಇನ್ನಿತರ ಉಪಸ್ಥಿತರಿದ್ದರು.

## ಭವಿಷ್ಯಕ್ಕಾಗಿ ಇತಿಹಾಸ ಅರಿಯುವ ವ್ಯಕ್ತಿಯಿಂದ ಮಾತ್ರ ಸಮಾಜದಲ್ಲಿ ಬದಲಾವಣೆ ಸಾಧ್ಯ

ಸಂಕೇಶ್ವರ: "ಭವ್ಯ ಭಾರತದ ಇತಿಹಾಸ ದೇಶದ ಭವಿಷ್ಯಕ್ಕಾಗಿ ಸಾಕಷ್ಟು ಕೊಡುಗೆ ನೀಡಿದ್ದು, ಭವಿಷ್ಯಕ್ಕಾಗಿ ಇತಿಹಾಸ ಅರಿಯುವ ವ್ಯಕ್ತಿಯಿಂದ ಮಾತ್ರ ಸಮಾಜದಲ್ಲಿ ಬದಲಾವಣೆ ತರಲು ಸಾಧ್ಯ" ಎಂದು ಆದಿಚುಂಚನಗಿರಿಮಠದ ಆಡಳಿತಾಧಿಕಾರಿ ಜೆ.ಎನ್. ರಾಮಕೃಷ್ಣೇಗೌಡ ಹೇಳಿದರು.

ಸಮೀಪದ ನಿಡಸೋಸಿಯ ಜಗದ್ಗುರು ದುರದುಂಡೀಶ್ವರ ಸಿದ್ಧ ಸಂಸ್ಥಾನ ಮಠದಲ್ಲಿ ಬುಧವಾರ ಸಂಜೆ ನಡೆದ ಮಹಾಶಿವರಾತ್ರಿ ಮಹೋತ್ಸವದ ಮುಖ್ಯ ಅತಿಥಿಯಾಗಿ ಭಾಗವಹಿಸಿ ಅವರು ಮಾತನಾಡಿದರು.

ಶಿವಶರಣರ ಉದ್ದೇಶಗಳನ್ನುಉಳಿಸಿ–ಬೆಳೆಸುವ ಕಾರ್ಯ ಇಂದಿನ ಮಠಮಾನ್ಯಗಳು ಹಾಗೂ ಮಠಾಧೀಶರಿಂದಾಗುತ್ತಿದೆ.




ಇತಿಹಾಸದ ಪ್ರೇರಣೆ ಪಡೆದ ವ್ಯಕ್ತಿ, ಮೌಲ್ಯಗಳು ಸಮಾಜದಲ್ಲಿ ಹೊಸ ರೂಪ ಪಡೆಯುತ್ತವೆ ಎಂದರು.

ಬೆಂಗಳೂರಿನ ತಜ್ಞ ವೈದ್ಯೆ ಡಾ.ವಿಜಯಲಕ್ಷ್ಮೀ ಬಾಳೇಕುಂದ್ರಿ ಮಾತನಾಡಿ, ಮಠಗಳು ಕೇವಲ ಧರ್ಮ ಪ್ರಚಾರದ ಕೇಂದ್ರಗಳಾಗದೆ, ಸಮಾಜದ ಎಲ್ಲ ವರ್ಗಗಳ ಜನರಲ್ಲಿ ಜಾಗೃತಿ ಮೂಡಿಸಿ, ಸರಿ–ತಪ್ಪುಗಳ ತಿಳಿವಳಿಕೆ ನೀಡುವ ಮೂಲಕ ಸ್ವಸ್ಥ ಸಮಾಜ ನಿರ್ಮಾಣದಲ್ಲಿ ತೊಡಗಿವೆ. ಪುರುಷ ಪ್ರಧಾನ ಸಮಾಜದಲ್ಲಿ ಹೆಣ್ಣಿಗೆ ಪ್ರಾತಿನಿಧ್ಯ ನೀಡುವಲ್ಲಿ ಮಠಗಳು ಪ್ರಮುಖ ಪಾತ್ರ ವಹಿಸಿವೆ ಎಂದರು.

ಪ್ರವಚನಕಾರ ವೀರೇಶ ಶರಣರು ಮಾತನಾಡಿ, ಭಾರತದ ಇಂದಿನ ಗತವೈಭವಕ್ಕೆ ಸಹಸ್ರಾರು ತ್ಯಾಗಿಗಳ ಪರಿಶ್ರಮ ಅಡಗಿದ್ದು, ದೇಶದ ಸಂಸ್ಕೃತಿ ಆಚಾರ–ವಿಚಾರಗಳನ್ನು ಹೃದಯದಿಂದ ಗೌರವಿಸು ವುದೇ ದೇಶಪ್ರೇಮ. ಈ ಹಿಂದೆ ಶಿಲಾಯುಗದಲ್ಲಿ ಮನುಷ್ಯ ತನ್ನ ಉಪಜೀವನಕ್ಕಾಗಿ ಶಿಲೆಗಳನ್ನೇ ಬಳಸುತ್ತಿದ್ದ ಕಾರಣಕ್ಕೆ 'ಶಿಲಾಯುಗ' ಎಂದು ಕರೆಯಲಾಯಿತು. ಸಿಂಧು ನಾಗರಿಕತೆ ಮನುಷ್ಯನ ಬದುಕಿನಲ್ಲಿ ಬದಲಾವಣೆ ತಂದಿತು. ಭಾರತದ ಸಂಪತ್ತನ್ನು ಕೊಂಡೊಯ್ಯಲು ಬ್ರಿಟಿಷರು ರೈಲು ಕಂಡುಹಿಡಿದಿದ್ದು ಅಂದಿನ ದೊಡ್ಡ ಸಾಧನೆಯಾಗಿತ್ತು.

ಅಂತೆಯೇ ದೇಶದ ಸಾಧನೆಗಳ ಜೊತೆಗೆ ವೈಫಲ್ಯಗಳನ್ನು ಅರಿಯುವುದು ಅಗತ್ಯವಾಗಿದೆ ಎಂದರು.

ಜಗದ್ಗುರು ಪಂಚಮ ಶ್ರೀ ಶಿವಲಿಂಗೇಶ್ವರ ಸ್ವಾಮೀಜಿ ಚಿಕ್ಕೋಡಿ ಸಂಪಾದನಾ ಸ್ವಾಮೀಜಿ, ಮಜಲಟ್ಟಿಯ ಬಸವಪ್ರಭು ಮಹಾರಾಜರು ಸಾನ್ನಿಧ್ಯ ವಹಿಸಿದ್ದರು.

ಈ ಸಂದರ್ಭದಲ್ಲಿ ಸಂಜು ಪಾಟೀಲ, ರಾಜು ಯರಗಟ್ಟಿ, ಶಿವಾನಂದ ಪದ್ಮಣ್ಣವರ. ಬಸವಣ್ಣಿ ಹೆಗ್ಗಾಯಿ, ಅಣ್ಣಪ್ಪಾ ಮಗದುಮ್ಮ, ಮಲ್ಲಪ್ಪಾ ತನೋಡಿ, ಬಾಬು ಮಾಳಿ ಇನ್ನಿತರು ಉಪಸ್ಥಿತರಿದ್ದರು.

ಸುನೀತಾ ಬಾಗೇವಾಡಿ ಸ್ವಾಗತಿಸಿದರು. ಶೋಭಾ ಮುತಗಿ ಪರಿಚಯಿಸಿ, ಶ್ವೇತಾ ಗೌಡಾಡಿ ನಿರೂಪಿಸಿದರು. ಸಂತೋಷ ಪಾಟೀಲ ವಂದಿಸಿದರು.

## ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಡಾ.ಅರವಿಂದ ಪಾಟಿಲ್ ಅಧ್ಯಕ್ಷರನ್ನಾಗಿ ನಿಯೋಜನೆ



ಬಳ್ಳಾರಿ : ಚಿಂತಕ, ಸಾಹಿತಿ ಡಾ.ಅರವಿಂದ ಪಾಟಿಲ್ ಅವರನ್ನು 22ನೇ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರನ್ನಾಗಿ ನಿಯೋಜಿಸಲಾಗಿದೆ ಎಂದು ಬಳ್ಳಾರಿ ಜಿಲ್ಲಾ ಸಾಹಿತ್ಯ ಪರಿಷತ್ ಅಧ್ಯಕ್ಷ ನಿಷ್ಠಿ ರುದ್ರಪ್ಪ ಅವರು ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

ಬಳ್ಳಾರಿಯ ಕನ್ನಡ ಭವನದಲ್ಲಿ ಜಿಲ್ಲಾಧ್ಯಕ್ಷ ಡಾ.ನಿಷ್ಠಿ ರುದ್ರಪ್ಪ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಅಖಂಡ ಬಳ್ಳಾರಿ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನವನ್ನು 28.02.2023 ರಂದು ಮತ್ತು 01.03. 2023 ರಂದು ಎರಡು ದಿನಗಳ ಕಾಲ ಬಳ್ಳಾರಿಯಲ್ಲಿ ನಡೆಸಲು ಕನ್ನಡ ಸಾಹಿತ್ಯಪರಿಷತ್ತು ಕಾರ್ಯಕಾರಿ ಸಮಿತಿ ತೀರ್ಮಾನಿಸಿದೆ. ಬಳ್ಳಾ–ರಿಯ ವೈದ್ಯ, ಕವಿ ಮತ್ತು ಬರಹಗಾರ ಹಾಗೂ ಅನುವಾದಕರಾದ ಡಾ.ಅರವಿಂದ ಪಟೇಲರನ್ನು 22ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಕಾರ್ಯಕಾರಿ ಸರ್ವಾನುಮತದಿಂದ ನಿಯೋಜಿಸಿದೆ ಎಂದು ಅವರು ತಿಳಿಸಿದ್ದಾರೆ.

ಕಸಾಪ ಜಿಲ್ಲಾ ಗೌರವ ಕಾರ್ಯದರ್ಶಿ ಡಾ.ಕೆ.ಶಿವಲಿಂಗಪ್ಪ ಹಂದಿಹಾಳು ಅವರು ಪ್ರಕಟಣೆ ಬಿಡುಗಡೆಗೊಳಿಸಿದ್ದಾರೆ.

## ಬಸ್ ಸ್ಟಾಂಡ್ ಉದ್ಘಾಟನೆ



ಬಳ್ಳಾರಿ : ಬಳ್ಳಾರಿ ಜಿಲ್ಲೆಯ ಸಿರುಗುಪ್ಪ ತಾಲೂಕಿನ ಶಾಸಕ ಸೋಮಲಿಂಗಪ್ಪನವರ ಅನುದಾನದಡಿಯಲ್ಲಿ ಶಾನವಾಸಪುರ ಗ್ರಾಮದಲ್ಲಿ ನೂತನ ಬಸ್ಟಾಂಡ್ ಉದ್ಘಾಟಿಸಲಾಯಿತು.

ತಾಲೂಕಿನ ಶಾನವಾಸಪುರ ಗ್ರಾಮದಿಂದ ಕೊಂಚಿಗೇರಿ ಗ್ರಾಮದ ವರೆಗೆ ರಸ್ತೆ ಡಾಂಬರೀಕರಣವನ್ನು 53ಲಕ್ಷ ರೂಪಾಯಿ ವೆಚ್ಚದಲ್ಲಿ ಶಾಸಕ ಎಂ.ಎಸ್ ಸೋಮಲಿಂಗಪ್ಪ ಭೂಮಿ ಪೂಜೆಯನ್ನು ನೆರವೇರಿಸಿದರು. ಈ ಸಂದರ್ಭದಲ್ಲಿ ಗ್ರಾಮದ ಮುಖಂಡರು, ಪಕ್ಷದ ಪ್ರಮುಖರು ಮತ್ತು ಕಾರ್ಯಕರ್ತರು, ಇನ್ನಿತರರು ಉಪಸ್ಥಿತರಿದ್ದರು.

## ಗೃಹ ಸಚಿವ ಅರಗ ಜ್ಞಾನೇಂದ್ರರಿಂದ ದ್ವೇಷದ ರಾಜಕೀಯ: ಡಿಕೆಶಿ ಆರೋಪ

ತೀರ್ಥಹಳ್ಳಿ: "ರಾಜ್ಯದ ಗೃಹ ಸಚಿವ ಅರಗ ಜ್ಞಾನೇಂದ್ರ ಅವರು ಕಾರ್ಯಕರ್ತರ ಮೇಲೆ ಕೇಸು ಹಾಕಿ ದ್ವೇಷದ ರಾಜಕಾರಣ ಮಾಡುತ್ತಿದ್ದಾರೆ" ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಆರೋಪಿಸಿದ್ದಾರೆ.

ಪ್ರಜಾಧ್ವನಿ ಯಾತ್ರೆ ಸಮಾವೇಶದಲ್ಲಿ ಬುಧವಾರ ಮಾತನಾಡಿದ ಅವರು, ಪಿಎಸ್ಐ ನೇಮಕಾತಿಯಲ್ಲಿ ಒಎಂಆರ್ ಶೀಟ್ ತಿದ್ದಿ ಅಕ್ರಮ ಮಾಡಲಾಗಿದೆ. ಸದನದಲ್ಲಿ ಅಕ್ರಮವೇ ನಡೆದಿಲ್ಲ ಎಂದು ಸುಳ್ಳು ಹೇಳಿದರು. ತಪ್ಪು ನಡೆದಿಲ್ಲವಾದರೆ ಐಪಿಎಸ್ ಸೇರಿದಂತೆ ನೂರಕ್ಕೂ ಹೆಚ್ಚು ಜನ ಜೈಲು ಸೇರಿದ್ದು ಯಾಕೆ?" ಎಂದು ಪ್ರಶ್ನಿಸಿದರು.

ಬಿಜೆಪಿ ಸರಕಾರ ಯುವಕರ ಭವಿಷ್ಯದ ಜತೆ ಈ ಸರ್ಕಾರ ಚೆಲ್ಲಾಟವಾಡುತ್ತಿದೆ. ಅಧಿಕಾರಿಗಳನ್ನು ಜೈಲಿಗೆ ಹಾಕುವುದರ



ಜತೆಗೆ ಇದಕ್ಕೆ ಕಾರಣರಾದ ಮಂತ್ರಿಗಳನ್ನು ಒಳಗೆ ಹಾಕಬೇಕು. ಈ ಸರ್ಕಾರದ ಅವಧಿ ಇನ್ನು 60 ದಿನ ಮಾತ್ರ. ನಂತರ ಜನ ಬಿಜೆಪಿಯವರಿಗೆ ಗಂಟೂಮೂಟೆ ಕಟ್ಟಿ ಮನೆಗೆ ಕಳಿಸಲಿದ್ದಾರೆ" ಎಂದರು.

ಆಪರೇಷನ್ ಕಮಲ ಮಾಡಿ ಸರ್ಕಾರ ರಚಿಸಿದ ಬಿಜೆಪಿಯವರು ಕೊಟ್ಟ ಮಾತಿನಂತೆ ನಡೆದುಕೊಳ್ಳಲಿಲ್ಲ. ಚುನಾವಣೆಗೂ ಮುನ್ನ 600 ಭರವಸೆ ನೀಡಿದ್ದರು. 550 ಭರವಸೆ ಈಡೇರಿಸಿಲ್ಲ. ಸಿದ್ದರಾಮಯ್ಯ ಅವರ ಸರ್ಕಾರ 165 ಭರವಸೆ ನೀಡಿ 159 ಭರವಸೆ ಈಡೇರಿಸಿದ್ದೇವೆ. ಪ್ರತಿನಿತ್ಯ ಅವರ ಭರವಸೆ ಬಗ್ಗೆ ನಾವು ಪ್ರಶ್ನೆ ಕೇಳುತ್ತಿದ್ದರೂ ಯಾವುದೇ ಉತ್ತರ ಸಿಗುತ್ತಿಲ್ಲ" ಎಂದು ಡಿಕೆಶಿ ಹೇಳಿದರು.

ಬಿಜೆಪಿಯವರು ಸಂಕಲ್ಪ ಯಾತ್ರೆ ಮಾಡುತ್ತಿದ್ದಾರೆ? ಜನ ಇವರನ್ನು ಮನೆಗೆ ಕಳಿಸುವ ಸಂಕಲ್ಪ ಮಾಡಿದ್ದಾರೆ ಎಂದು ಲೇವಡಿ ಮಾಡಿದ ಅವರು, ಶಿವಮೊಗ್ಗ ಅಭಿವೃದ್ಧಿ ಆಗಿದೆ ಎಂದು ಹೇಳುತ್ತಾರೆ. ಅಭಿವೃದ್ಧಿ ಆಗಿದ್ದರೆ, ಇತ್ತೀಚೆಗೆ ನಡೆದ ಜಾಗತಿಕ ಬಂಡವಾಳ ಹೂಡಿಕೆಯಲ್ಲಿ 10 ಲಕ್ಷ ಕೋಟಿ ಬಂದಿದೆ.

ಉಡುಪಿ, ಶಿವಮೊಗ್ಗ, ದಕ್ಷಿಣ ಕನ್ನಡ ಜಿಲ್ಲೆಗಳಿಗೆ ಬಂಡವಾಳವೇ ಬಂದಿಲ್ಲ. ಈ ಬಂಡವಾಳ ಬಂದರೆ ಉದ್ಯೋಗ ಸೃಷ್ಟಿಯಾಗುತ್ತದೆ. ಆದರೆ ಈ ಸರ್ಕಾರ ಮಲೆನಾಡು ಕರಾವಳಿ ಭಾಗದಲ್ಲಿ ಜಾತಿ, ಧರ್ಮಗಳ ನಡುವೆ ಜಗಳ ಸೃಷ್ಟಿಸಿ ರಾಜ–ಕಾರಣ ಮಾಡುತ್ತಿದೆ.

ಪೊಲೀಸರು ತಮ್ಮ ಸಮವಸ್ತ್ರ ತೆಗೆದು ಬೇರೆ ಬಟ್ಟೆ ಹಾಕಿಕೊಂಡು ಆಯುಧ ಪೂಜೆ ಮಾಡುತ್ತಾರೆ. ಜ್ಞಾನೇಂದ್ರ ಅವರೇ ನಿಮ್ಮ ಕಾಲದಲ್ಲಿ ಏನೆಲ್ಲಾ ಆಗುತ್ತಿದೆ?" ಎಂದು ಪ್ರಶ್ನಿಸಿದರು.

ಈ ಬಾರಿ ಕಾಂಗ್ರೆಸ್ ಪಕ್ಷ ಕರಾವಳಿ, ಮಲೆನಾಡು ಭಾಗಕ್ಕೆ ಪ್ರತ್ಯೇಕ ಪ್ರಣಾಳಿಕೆ ನೀಡಲು ನಿರ್ಧರಿಸಿದೆ.

ಕಲ್ಯಾಣ ಕರ್ನಾಟಕ ಭಾಗಕ್ಕೆ ಈಗಾಗಲೇ ವಿಶೇಷ ಯೋಜನೆ ಘೋಷಣೆ ಮಾಡಿದ್ದೇವೆ. ಪರಿಶಿಷ್ಟ ಜಾತಿ ಹಾಗೂ ಪಂಗಡದವರಿಗೆ ಕಾರ್ಯಕ್ರಮ ಘೋಷಿಸಿದ್ದೇವೆ ಎಂದು ಅವರು ಹೇಳಿದರು.

ಮಾಜಿ ಸಚಿವ ಕಿಮ್ಮನೆ ರತ್ನಾಕರ, ವಿ.ಎಸ್. ಉಗ್ರಪ್ಪ, ಎನ್.ಎ. ಹ್ಯಾರಿಸ್, ಕೆ.ಎಚ್. ಮುನಿಯಪ್ಪ ಮತ್ತಿತರ ಮುಖಂಡರು, ಸ್ಥಳೀಯ ಜನಪ್ರತಿನಿಧಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

## ಎನ್.ಎಸ್.ಎಸ್. ಘಟಕ ಅಂಗಡಿ ವಾಣಿಜ್ಯ ಮತ್ತು ವಿಜ್ಞಾನ ಮಹಾವಿದ್ಯಾಲಯದಿಂದ ಎನ್.ಜಿ.ಓ. ಗೆ ಭೇಟಿ




ಬೆಳಗಾವಿ. ಅಂಗಡಿ ವಾಣಿಜ್ಯ ಮತ್ತು ವಿಜ್ಞಾನ ಮಹಾವಿದ್ಯಾಲಯದ ಎನ್.ಎಸ್. ಎಸ್. ಘಟಕದ ಸ್ವಯಂ ಸೇವಕರು ದಿ. 8 ನೇ ಫೆಬ್ರುವರಿ 2023ರಂದು ಮಹೇಶ್ ಫೌಂಡೇಶನ್, ಕಣಬರ್ಗಿಗೆ ಭೇಟಿ ನೀಡಿಆಹಾರ ಪ್ಯಾಕೆಟ್‌ಗಳು ಮತ್ತು ಅಗತ್ಯ ವಸ್ತುಗಳನ್ನು ದಾನ ಮಾಡಿದರು.

ಎನ್.ಎಸ್. ಎಸ್. ಘಟಕದ ಸ್ವಯಂ ಸೇವಕರು ವಿವಿಧ ಸಂಸ್ಥೆಗಳ ಕಾರ್ಯರಚನೆಯನ್ನು ಅರ್ಥಮಾಡಿ ಕೊಂಡರು. ಸಂಸ್ಥೆಯು ಮಕ್ಕಳ ಆರೋಗ್ಯವನ್ನು ಹೇಗೆ ಸಹಾಯ ಮಾಡುತ್ತದೆ ಮತ್ತು ಕಾಳಜಿ ವಹಿಸುತ್ತದೆ, ಕೌಶಲ್ಯಆಧಾರಿತ ಶಿಕ್ಷಣವನ್ನು ನೀಡುವುದು, ಪೌಷ್ಟಿಕ ಆಹಾರ ಮತ್ತುಆಹಾರ ಪೂರಕಗಳನ್ನು ಒದಗಿಸುವುದು, ಹಿಂದುಳಿದ ವಿದ್ಯಾರ್ಥಿಗಳಿಗೆ ಸ್ವತಂತ್ರ ಮತ್ತುಘನತೆಯಿಂದ ಬದುಕಲುಉತ್ತಮ ಶಿಕ್ಷಣ ಬೆಂಬಲವನ್ನುಒದಗಿಸುತ್ತದೆ

ಶ್ರೀ ಮಹೇಶ ಜಾಧವಅವರು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ಎಚ್.ಐ.ವಿ/ಏಡ್ಸ್‌ಗೆ ಅಂಟಿರುವ ಕಳಂಕ ಮತ್ತುತಾರತಮ್ಮದ ಬಗ್ಗೆ ಮತ್ತು ಈ ಕಾಯಿಲೆಯಿಂದ ಪೀಡಿತ ಮಕ್ಕಳನ್ನು ಸಬಲೀಕರಣಗೊಳಿಸುವ ಬಗ್ಗೆ ಮಾತನಾಡಿದರು.

## ಹಣದ ಕೊರತೆ: ಪತ್ನಿಯ ಮೃತದೇಹವನ್ನು 33 ಕಿ.ಮೀ ಹೊತ್ತು ಸಾಗಿದ ಪತಿ

ಭುವನೇಶ್ವರ್: ಶವ ಸಾಗಾಟ ವಾಹನದ ವ್ಯವಸ್ಥೆ ಮಾಡಲು ಹಣದ ಕೊರತೆ ಹಿನ್ನೆಲೆಯಲ್ಲಿ ಒಡಿಶಾ ಮೂಲದ ವ್ಯಕ್ತಿಯೊಬ್ಬ ತನ್ನ ಪತ್ನಿಯ ಮೃತದೇಹವನ್ನು ಸುಮಾರು 33 ಕಿ.ಮೀ ದೂರ ಭುಜದ ಮೇಲೆ ಹೊತ್ತು ನಡೆದ ಹೃದಯ ವಿದ್ರಾವಕ ಘಟನೆ ಆಂಧ್ರ ಪ್ರದೇಶದಲ್ಲಿ ನಡೆದಿದೆ.

ವರದಿಗಳ ಪ್ರಕಾರ ಒಡಿಶಾದ ಕೊರಪಟ್ ಜಿಲ್ಲೆಯ ಪೊಟ್ಟಾಂಗಿ ಏರಿಯಾದ ನಿವಾಸಿಗಳಾದ ಗುರು ಮತ್ತು ಆತನ ಪತ್ನಿ, ಆಂಧ್ರದ ವಿಶಾಖಪಟ್ಟಣದಲ್ಲಿ ಕಾರ್ಮಿಕರಾಗಿ ಕೆಲಸ ಮಾಡುತ್ತಿದ್ದರು. ಪತ್ನಿಯ ಆರೋಗ್ಯ ಸ್ಥಿತಿ ತುಂಬಾ ಹದಗೆಟ್ಟಿದ್ದರಿಂದ ಕೆಲವು ದಿನಗಳ ಹಿಂದಷ್ಟೇ ಆಕೆಯನ್ನು ಸಾಗರ್ಬಾಲ್ಸಾದಲ್ಲಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದಾಗ್ಯೂ ಚಿಕಿತ್ಸೆ ಫಲಿಸದೇ ಗುರು ಪತ್ನಿ ತೀರಿಕೊಂಡಳು.

ಚಿಕಿತ್ಸೆಗೂ ಹಣವಿಲ್ಲದ ವಿಷಮ ಸ್ಥಿತಿಯಲ್ಲಿ ಗುರು, ತನ್ನ ಪತ್ನಿಯ ಅಂತ್ಯಕ್ರಿಯೆಗಾಗಿ, ಆಕೆಯ ಮೃತದೇಹವನ್ನು ಹೇಗಾದರೂ ಊರಿಗೆ ಕಳುಹಿಸಿಕೊಡುವ ವ್ಯವಸ್ಥೆ ಮಾಡಿಕೊಡುವಂತೆ ಆಸ್ಪತ್ರೆಯ ಅಧಿಕಾರಿಗಳ ಬಳಿ ಮನವಿ ಮಾಡಿಕೊಂಡಿದ್ದ. ಆದರೆ, ಕಲ್ಲು ಹೃದಯದ ಅಧಿಕಾರಿಗಳು



ಗುರುವಿನ ಮನವಿಗೆ ಸ್ಪಂದಿಸಲಿಲ್ಲ. ಯಾವುದೇ ಸಹಾಯವನ್ನು ಮಾಡದೇ ತಮ್ಮ ಪಾಡಿಗೆ ಹೊರಟು ಹೋದರು. ಕೊನೆಗೆ ಯಾವುದೇ ಆಯ್ಕೆ ಗುರುವಿಗೆ ಉಳಿಯಲಿಲ್ಲ. ಬಳಿಕ ಮೃತದೇಹವನ್ನು ಹೊತ್ತುಕೊಂಡೇ ಸಾಗುವ ನಿರ್ಧಾರಕ್ಕೆ ಬಂದ. ವಿಶಾಖಪಟ್ಟಣದಿಂದ ತನ್ನ ತವರಿಗೆ ಪತ್ನಿಯ ಮೃತದೇಹವನ್ನು ಭುಜದಲ್ಲಿ ಹೊತ್ತು ನಡೆಯುತ್ತಾ ಸಾಗಿದ. ಮಾರ್ಗ ಮಧ್ಯೆ ಅನೇಕರು ಅದನ್ನು ಗಮನಿಸಿದರೂ ಸಹಾಯಕ್ಕೆ ಧಾವಿಸಲಿಲ್ಲ.






BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti, Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089